MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 94 | ಗುರುವಾರ : 29-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 94 | THURSDAY : 29-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

ಫೆ.7ರಂದು ರಾಯಚೂರು ಜಿಲ್ಲಾ ಮಟ್ಟದ ಗ್ಯಾರಂಟಿ ಸಮಾವೇಶ

## ಗ್ಯಾರಂಟಿ ಸಮಾವೇಶ ಯಶಸ್ವಿಗೊಳಿಸಲು ಸಮಿತಿಯ ಅಧ್ಯಕ್ಷ ಪಾಮಯ್ಯ ಮುರಾರಿ ಸೂಚನೆ

ಯುವಮಾರ್ಗ ಸುದ್ದಿ



**ರಾಯಚೂರು,ಜ.28–** ಜಿಲ್ಲೆಯಲ್ಲಿ ಫೆ.05 ರಿಂದ ಫೆ.07ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರಲ್ಲಿ ಫೆ.07ರಂದು ಹಮ್ಮಿಕೊಂಡ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಾವೇಶ ಕಾರ್ಯಕ್ರಮವು ಯಶಸ್ವಿಯಾಗಿ ನಡೆಯುವಂತೆ ಗ್ಯಾರಂಟಿ ಯೋಜನೆಗೆ ಸಂಬಂಧಿಸಿದ ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಹೇಳಿದರು.

ಜನವರಿ 28ರ ಬುಧವಾರ ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ನಡೆದ ಗ್ಯಾರಂಟಿ ಸಮಾವೇಶದ ಸಿದ್ಧತೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು, ಜಿಲೆಯ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಹಾಗೂ ರಾಜ್ಯ ಉಪಾಧ್ಯಕ್ಷರು, ಜಿಲೆಯ ಎಲ್ಲ ಜನಪ್ರತಿನಿಧಿಗಳು ಸೇರಿದಂತೆ ಜಿಲ್ಲಾ ಹಾಗೂ ರಾಯಚೂರು, ಮಾನವಿ, ಸಿಂಧನೂರ, ಮಸ್ಕಿ, ಲಿಂಗಸೂರು, ದೇವದುರ್ಗ, ಸಿರವಾರ ಸೇರಿದಂತೆ ವಿವಿಧ ತಾಲೂಕುಗಳ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಭಾಗವಹಿಸಲಿದ್ದಾರೆ. ರಾಯಚೂರು ಜಿಲ್ಲೆ ಮತ್ತು ತಾಲೂಕುವಾರು ವಿವಿಧ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಪ್ರಸ್ತುತ ಅವಧಿವರೆಗೂ ಸಾಧಿಸಿರುವ ಪ್ರಗತಿಯ ವಿವರಗಳ ಮಾಹಿತಿಯನ್ನು ವಿಡಿಯೋ ಸಾಕ್ಷ್ಯಚಿತ್ರಗಳ ಮೂಲಕ ಪ್ರದರ್ಶಿಸುವ ಕಾರ್ಯ ಮಾಡಬೇಕು ಎಂದು ತಿಳಿಸಿದರು. ರಾಯಚೂರು ಜಿಲ್ಲೆಯಲ್ಲಿನ ಗ್ಯಾರಂಟಿ ಯೋಜನೆಯಗಳ ಫಲಾನುಭವಿಗಳ ಯಶೋಗಾಥೆಯ ಬಗ್ಗೆ ನಾವು (2ನೇ ಪುಟಕ್ಕೆ>>>)

## ಡಿಸಿಎಂ ಪವಾರ್ ದುರ್ಮರಣ



**ಪುಣೆ, ಜ.28–** ಬಾರಾಮತಿ ಬಳಿ ಇಂದು ಬೆಳಿಗ್ಗೆ ಸಂಭವಿಸಿದ ಭೀಕರ ವಿಮಾನ ದುರಂತದಲ್ಲಿ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಮತ್ತು ಇತರ ಐವರು ಸಾವನ್ನಪ್ಪಿದ್ದಾರೆ. ಘಟನೆ ಕುರಿತು ಮಹಾರಾಷ್ಟ್ರ ಸರ್ಕಾರ ತನಿಖೆಗೆ ಆದೇಶಿಸಿದೆ.

ವಿಎಸ್‌ಆರ್ ನಿರ್ವಹಿಸುವ ಲಿಯರ್ಜೆಟ್ 45 ವಿಮಾನ (ನೋಂದಣಿ ವಿಟಿ–ಎಸ್‌ಎಸ್ಕೆ) ಪುಣೆಯ ಬಾರಾಮತಿ ಪ್ರದೇಶದಲ್ಲಿ ಇಳಿಯುತ್ತಿದ್ದಾಗ ಈ ಘಟನೆ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಪ್ರಾಥಮಿಕ ಮಾಹಿತಿಯ ಪ್ರಕಾರ, ಬಾರಾಮತಿ ವಿಮಾನ ನಿಲ್ದಾಣದಲ್ಲಿ ಇಳಿಯುವ ಸಮಯದಲ್ಲಿ ವಿಮಾನವು ನಿಯಂತ್ರಣ ಕಳೆದುಕೊಂಡು ಅಪಘಾತಕ್ಕೀಡಾಗಿದೆ.ಅಪಘಾತ ಸಂಭವಿಸಿದಾಗ ಲಿಯರ್ಜೆಟ್ 45 ವಿಮಾನದಲ್ಲಿ ಅಜಿತ್ ಪವಾರ್ ಸೇರಿದಂತೆ ಐವರು ಪ್ರಯಾಣಿಕರು ಮತ್ತು ಇನ್ನೂ ಇಬ್ಬರು ಸಿಬ್ಬಂದಿ (ಒಬ್ಬ ಪಿಎಸ್‌ಒ ಮತ್ತು ಒಬ್ಬ ಪರಿಚಾರಕ) ಮತ್ತು ಇಬ್ಬರು ಸಿಬ್ಬಂದಿ (ಪೈಲಟ್ ಇನ್–ಕಮಾಂಡ್ ಮತ್ತು ಮೊದಲ ಅಧಿಕಾರಿ) ಇದ್ದರು ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಬ್ಬರೂ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರನ್ನು ಸಂಪರ್ಕಿಸಿ ವಿಮಾನ ಅಪಘಾತದ ಬಗ್ಗೆ ಮಾಹಿತಿ ಪಡೆದಿದ್ದಾರೆ ಎಂದು ಮಹಾರಾಷ್ಟ್ರ ಸರ್ಕಾರ ಹೇಳಿಕೆಯಲ್ಲಿ ತಿಳಿಸಿದೆ.

ಅಜಿತ್ ಪವಾರ್ ಅವರು ಹಿರಿಯ ರಾಜಕಾರಣಿ ಮತ್ತು ಎನ್ ಸಿಪಿ ಸಂಸ್ಥಾಪಕ ಶರದ್ ಪವಾರ್ ಅವರ ಸೋದರಳಿಯ ಮತ್ತು ಲೋಕಸಭಾ ಸಂಸದೆ ಸುಪ್ರಿಯಾ ಸುಳೆ ಅವರ ಸೋದರಸಂಬಂಧಿ ಆಗಿದ್ದರು.ಅಜಿತ್ ಪವಾರ್ ಅವರು ಸತತವಾಗಿ ಮಹಾರಾಷ್ಟ್ರದ ಉಪಮುಖ್ಯಮಂತ್ರಿಯಾಗಿ ಸುದೀರ್ಘ ಕಾಲ ಸೇವೆ ಸಲ್ಲಿಸಿದ್ದರು. ಅವರು ವಿವಿಧ ಸರ್ಕಾರಗಳಲ್ಲಿ ಆರು ಅವಧಿಗೆ ಈ ಸ್ಥಾನದಲ್ಲಿ ಸೇವೆ ಸಲ್ಲಿಸಿದರು. ಪೃಥ್ವಿರಾಜ್ ಚವಾಣ್, ದೇವೇಂದ್ರ ಫಡ್ನವೀಸ್, ಉದ್ಧವ್ ಠಾಕ್ರೆ ಮತ್ತು ಏಕನಾಥ್ ಶಿಂಧೆ ಅವರ ಸಂಪುಟದಲ್ಲಿ ಉಪಮುಖ್ಯಮಂತ್ರಿಯಾಗಿ ಕೆಲಸ ಮಾಡಿದ್ದರು. (2ನೇ ಪುಟಕ್ಕೆ>)

## ಜಿಲ್ಲೆಯಲ್ಲೇ ಮೊದಲು: ಪಟ್ಟಣ ಪಂಚಾಯತ್ ಕ್ರಾಂತಿಕಾರಿ ಹೆಜ್ಜೆ, ಡಿಜಿಟಲ್ ಖಾತೆ ವಿತರಣೆ ಆರಂಭ.



ಯುವಮಾರ್ಗ ಸುದ್ದಿ

**ಸಿರವಾರ,ಜ.28–** ಸಿರವಾರ ಸಾರ್ವಜನಿಕರಿಗೆ ನಾಗರಿಕ ಸೇವೆಗಳನ್ನು ಮತ್ತಷ್ಟು ಸರಳಗೊಳಿಸುವ ನಿಟ್ಟಿನಲ್ಲಿ ಪಟ್ಟಣ ಪಂಚಾಯತ್ ಮಹತ್ವದ ಮೈಲಿಗಲ್ಲು ಸ್ಥಾಪಿಸಿದೆ. ಜಿಲ್ಲೆಯಲ್ಲಿಯೇ ಮೊದಲ ಬಾರಿಗೆ ಕರ್ನಾಟಕ ಒನ್ (Karnataka One) ಕೇಂದ್ರದ ಮೂಲಕ ಅಧಿಕೃತವಾಗಿ 'ಇ–ಖಾತೆ'ಯನ್ನು ನೋಂದಣಿ ಮಾಡಿ ಸಾರ್ವಜನಿಕರಿಗೆ ವಿತರಿಸುವ ಕಾರ್ಯವನ್ನು ಯಶಸ್ವಿಯಾಗಿ ಪೂರೈಸಲಾಗಿದೆ ಎಂದು ಪಟ್ಟಣ ಪಂಚಾಯತ್ ಮುಖ್ಯ ಅಧಿಕಾರಿಗಳು ತಿಳಿಸಿದ್ದಾರೆ.

ಖಾತೆ ವಿತರಣೆಯಲ್ಲಿ ಡಿಜಿಟಲ್ ಕ್ರಾಂತಿ

ಈ ಹಿಂದೆ ಸಾರ್ವಜನಿಕರು ಖಾತೆ ಬದಲಾವಣೆ ಅಥವಾ ಹೊಸ ಖಾತೆಗಾಗಿ ಪಟ್ಟಣ ಪಂಚಾಯಿತಿ ಕಚೇರಿಗೆ ಪದೇ ಪದೇ ಭೇಟಿ ನೀಡಬೇಕಿತ್ತು. ಇದರಿಂದ ಸಮಯದ ವ್ಯಯ ಮತ್ತು ಕೆಲಸದಲ್ಲಿ ವಿಳಂಬವಾಗುತ್ತಿತ್ತು. ಈಗ ಈ ಸೇವೆಯನ್ನು ಕರ್ನಾಟಕ ಒನ್ ಕೇಂದ್ರಗಳಿಗೆ ವಿಸ್ತರಿಸಲಾಗಿದ್ದು, ನಾಗರಿಕರು ತಮ್ಮ ಮನೆಗೆ ಹತ್ತಿರವಿರುವ ಕೇಂದ್ರಗಳಲ್ಲಿಯೇ ಅಗತ್ಯ ದಾಖಲೆಗಳನ್ನು ನೀಡಿ ಡಿಜಿಟಲ್ ಸಹಿ ಇರುವ ಇ–ಖಾತೆಯನ್ನು ಪಡೆದುಕೊಳ್ಳಬಹುದಾಗಿದೆ.

ಮುಖ್ಯ ಅಧಿಕಾರಿ ಸುರೇಶ್ ಶೆಟ್ಟಿ ಅವರ ಹೇಳಿಕೆ

ಸುದ್ದಿಗಾರರೊಂದಿಗೆ ಮಾತನಾಡಿದ ಸುರೇಶ್ ಶೆಟ್ಟಿ ಅವರು, "ಸಾರ್ವಜನಿಕರಿಗೆ ಪಾರದರ್ಶಕ ಮತ್ತು ವೇಗದ ಸೇವೆ ನೀಡುವುದೇ ನಮ್ಮ ಪ್ರಮುಖ ಉದ್ದೇಶ. ಕರ್ನಾಟಕ ಒನ್ ಕೇಂದ್ರಗಳ ಮೂಲಕ ಖಾತೆ ವಿತರಿಸುವ ಪ್ರಕ್ರಿಯೆಯ ಪ್ರಾಯೋಗಿಕ ಹಂತ ಅತ್ಯಂತ ಯಶಸ್ವಿಯಾಗಿದೆ. ತಾಂತ್ರಿಕ ಅಡೆತಡೆಗಳನ್ನು ಸಂಪೂರ್ಣವಾಗಿ ನಿವಾರಿಸಲಾಗಿದ್ದು, ಜನರು ಈ ಡಿಜಿಟಲ್ ಸೇವೆಯ ಸದುಪಯೋಗ ಪಡಿಸಿಕೊಳ್ಳಬೇಕು" ಎಂದು ಮನವಿ ಮಾಡಿದರು.

**ಖಾತೆ ಪಡೆಯಲು ಬೇಕಾಗುವ ಪ್ರಮುಖ ದಾಖಲೆಗಳು:**

ಸಾರ್ವಜನಿಕರು ಕರ್ನಾಟಕ ಒನ್ ಕೇಂದ್ರಕ್ಕೆ ಭೇಟಿ ನೀಡುವಾಗ ಈ ಕೆಳಗಿನ ದಾಖಲೆಗಳನ್ನು ಮೂಲಪ್ರತಿಯೊಂದಿಗೆ ತರಲು ಸೂಚಿಸಲಾಗಿದೆ:

ಆಸ್ತಿಯ ನೋಂದಾಯಿತ ಕ್ರಯ ಪತ್ರ (Sale Deed). ಇತ್ತೀಚಿನ ಆಸ್ತಿ ತೆರಿಗೆ ಪಾವತಿಸಿದ ರಸೀದಿ. ಮಾಲೀಕರ ಆಧಾರ್ ಕಾರ್ಡ್ ಪ್ರತಿ. ಆಸ್ತಿಯ ಹಳೆಯ ಖಾತೆ ಅಥವಾ ಫಾರಂ–3 (ಲಭ್ಯವಿ ದ್ದಲ್ಲಿ).ಮಾಲೀಕರ ಇತ್ತೀಚಿನ ಭಾವಚಿತ್ರ ಮತ್ತು ಮೊಬೈಲ್ ಸಂಖ್ಯೆ

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತ್ ನೂತನ ಅಧ್ಯಕ್ಷರಾದ ಹಾದಿ ಚೌದರಿ. ಪಟ್ಟಣ ಪಂಚಾಯತ್ ಸದಸ್ಯರಾದ ಸೂರಿ ದುರ್ಗಣ್ಣ. ಮಾರ್ಖಂಡಪ್ಪ ಹಾಗೂ ಪಟ್ಟಣ ಪಂಚಾಯಿತಿ ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು

## ರಾಯಚೂರು ಉತ್ಸವದ ಕಾರ್ಯಕ್ಕೆ ನಾವೂ ಕೈ ಜೋಡಿಸುತ್ತೇವೆ ಉತ್ಸವದ ವಿವಿಧ ಸಮಿತಿಗಳ ಸದಸ್ಯರ ಅಭಿಮತ





ಯುವಮಾರ್ಗ ಸುದ್ದಿ

**ರಾಯಚೂರು,ಜ.28–** ರಾಯಚೂರು ಜಿಲ್ಲಾ ಉತ್ಸವದ ನೂತನ ವಿವಿಧ ಸಮಿತಿಗಳ ಅಧ್ಯಕ್ಷರು, ಸದಸ್ಯ ಕಾರ್ಯದರ್ಶಿಗಳು ಮತ್ತು ಸದಸ್ಯರ ಹಾಗೂ ಸಮನ್ವಯ ಅಧಿಕಾರಿಗಳ ಸಭೆಯು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ಅಧ್ಯಕ್ಷತೆಯಲ್ಲಿ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 28ರಂದು ನಡೆಯಿತು.

ಈ ಸಭೆಯಲ್ಲಿ ಭಾಗಿಯಾಗಿದ್ದ ಹಿರಿಯ ರೈತ ಮುಖಂಡರಾದ ಚಾಮರಸ ಪಾಟೀಲ, ಕರ್ನಾಟಕ ಸಂಘದ ಅಧ್ಯಕ್ಷರಾದ ಕೆ.ಶಾಂತಪ್ಪ, ಹೋರಾಟಗಾರರಾದ ಬಸವರಾಜ ಕಳಸ ಸೇರಿದಂತೆ ಇನ್ನಿತರರು ಮಾತನಾಡಿ, ರಾಯಚೂರು ಜಿಲ್ಲಾ ಉತ್ಸವದ ಮೊದಲನೇ ಸಾರ್ವಜನಿಕ ಸಭೆಯಲ್ಲಿ ಕೇಳಿ ಬಂದ ಬಲವಾದ ಅಭಿಪ್ರಾಯದಂತೆ ಜಿಲ್ಲಾಡಳಿತವು ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಗಣ್ಯರು ಮತ್ತು ಇನ್ನಿತರ ಮಹನಿಯರ ಒಳಗೊಂಡು ಹೊಸ ಸಮಿತಿಗಳನ್ನು ರಚಿಸಿದ್ದು ಅತ್ಯಂತ ಸ್ವಾಗತಾರ್ಹ ಕ್ರಮವಾಗಿದೆ. ಈ ಸಮಿತಿಯ ಸದಸ್ಯರಾದ ನಾವು ಉತ್ಸವದ ಕಾರ್ಯದಲ್ಲಿ ಭಾಗಿಯಾಗುತ್ತೇವೆ. ಈ ಸಮಿತಿಗಳಲ್ಲಿನ ಅಧಿಕಾರಿಗಳು ನಮ್ಮೆಲ್ಲರನ್ನು ವಿಶ್ವಾಸಕ್ಕೆ ಪಡೆದು ಕಾರ್ಯನಿರ್ವಹಿಸಬೇಕು ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಮೊದಲಿಗೆ ವಿವಿಧ ಸಮಿತಿಗಳಲ್ಲಿ ಸದಸ್ಯರು ಉತ್ಸವದ ಕುರಿತು ನಾನಾ ಸಲಹೆ ನೀಡಿದರು. ರಾಯಚೂರು ಉತ್ಸವದ ನಿಮಿತ್ತ ಜಿಲ್ಲಾಡಳಿತವು ಜ್ಯೋತಿ ರಥಯಾತ್ರೆ ಕಾರ್ಯಕ್ರಮ ಹಮ್ಮಿಕೊಂಡಿದ್ದು ಉತ್ತಮ ಪ್ರಯತ್ನವಾಗಿದೆ. ಈ ಕಾರ್ಯಕ್ರಮದಲ್ಲಿ ಶಾಲಾ ಕಾಲೇಜಿನ ವಿದ್ಯಾರ್ಥಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸೇರಿಸಬೇಕು ಎಂದು ಕರ್ನಾಟಕ ಸಂಘದ ಕೆ.ಶಾಂತಪ್ಪ ಅವರು ಸಲಹೆ ಮಾಡಿದರು.

ಉತ್ಸವದಲ್ಲಿ ಪ್ಲಾಸ್ಟಿಕ್ ಬಳಕೆ ಮಾಡಬಾರದು ಎಂದು ರೈತ ಸಂಘದ ಮುಖಂಡರದ ಅನಿತಾ ಅವರು ಸಲಹೆ ಮಾಡಿದರು. ರಸ್ತೆಗಳಲ್ಲಿ ಅಳವಡಿಸಿದ ಅಲಂಕೃತ ಬಟ್ಟೆಯನ್ನು ಸರಿಪಡಿಸಬೇಕು ಎಂದು ಕನ್ನಡಪರ ಸಂಘಟನೆಯ ಅಶೋಕ ಜೈನ್ ಅವರು ತಿಳಿಸಿದರು.

ಉತ್ಸವಕ್ಕೆ ವಿವಿಧ ಸಂಘ–ಸಂಸ್ಥೆಗಳ ಪ್ರತಿನಿಧಿಗಳ ಸಹಕಾರ ಪಡೆದುಕೊಳ್ಳಲು ಹೊಸ ಸಮಿತಿಗಳನ್ನು ರಚಿಸಿದ್ದು ಅತ್ಯಂತ ಸ್ವಾಗತಾರ್ಹ ಕ್ರಮವಾಗಿದೆ. ಈ ಸಮಿತಿಗಳಲ್ಲಿನ ಅಧಿಕಾರಿಗಳು ನಮಗೆ ಸಂಪರ್ಕಿಸಿ ಆಯಾ (2ನೇ ಪುಟಕ್ಕೆ>>>)

## ವಾರ್ತಾ ಇಲಾಖೆಯ ಮಾಹಿತಿ ಪ್ರದರ್ಶನ ಮಳಿಗೆಗೆ ಚಾಲನೆ

ಯುವಮಾರ್ಗ ಸುದ್ದಿ



**ರಾಯಚೂರು,ಜ.28–** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಮಾಹಿತಿ ಪ್ರದರ್ಶನ ಮಳಿಗೆಗೆ ರಾಯಚೂರು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಚಾಲನೆ ನೀಡಿದರು.

ಲಿಂಗಸೂರು ಕೇಂದ್ರ ಬಸ್ ನಿಲ್ದಾಣದಲ್ಲಿ ಜನವರಿ 28ರಂದು ನಡೆದ ಕಾರ್ಯಕ್ರಮದಲ್ಲಿ ರಿಬ್ಬನ್ ಕತ್ತರಿಸುವ ಮೂಲಕ ಮಳಿಗೆಯನ್ನು ಉದ್ಘಾಟಿಸಿದರು. ಇದೆ ವೇಳೆ, ಸಾಂಪ್ರದಾಯಿಕ ಮಾದರಿಯಲ್ಲಿ ಸಿದ್ಧಪಡಿಸಿದ್ದ ದೀಪ ಪ್ರಜ್ವಲನೆ ಕಾರ್ಯಕ್ರಮದಲ್ಲಿ ದೀಪ ಬೆಳಗಿಸಿ ಮಾತನಾಡಿದ ಪಾಮಯ್ಯ ಮುರಾರಿ ಅವರು, ಶಕ್ತಿ, ಅನ್ನಭಾಗ್ಯ, ಗೃಹಲಕ್ಷ್ಮಿ , ಗೃಹಜ್ಯೋತಿ, ಯುವನಿಧಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಜೊತೆಗೆ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನರ ಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದೆ. ಎಸ್ಸಿಪಿ ಟಿಎಸ್ಪಿ ಪ್ರತಿಭಾವಂತರಿಗೆ ಪ್ರೋತ್ಸಾಹ ಧನ, ಲೀಡ್ಕರ್ ಅನುಷ್ಠಾನ ಕಾರ್ಯಕ್ರಮ, ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ವಿವಿಧ ನಿಗಮಗಳ ಅನುಷ್ಠಾನ ಸೇರಿದಂತೆ ನಾನಾ ಕಾರ್ಯಕ್ರಮಗಳನ್ನು ರಾಜ್ಯ ಸರ್ಕಾರವು ಅಚ್ಚುಕಟ್ಟಾಗಿ ಜಾರಿ ಮಾಡುತ್ತಿದೆ ಎಂದು ತಿಳಿಸಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ (2ನೇ ಪುಟಕ್ಕೆ>>>)

## ಜ.31 ರಂದು ಶ್ರೀ ಸಿದ್ದರಾಮಾನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮ



ಯುವಮಾರ್ಗ ಸುದ್ದಿ

**ಮಾನ್ವಿ,ಜ.28–** ಪಟ್ಟಣದ ಪತ್ರಿಕಾ ಭವನದಲ್ಲಿ ತಾಲೂಕು ಕುರುಬರ ಸಂಘದ ಅಧ್ಯಕ್ಷರಾದ ಸತ್ಯನಾ ರಾಯಣ ಆರ್. ಮುಸ್ಟೂರ್ ವಕೀಲರು ಮಾತ ನಾಡಿ ತಿಂಥಣಿ ಬ್ರಿಡ್ಜ್ ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠ ಶಾಖಾಮಠದಲ್ಲಿ ಜ.31 ರಂದು ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಶ್ರೀ ನಿರಾಂಜನ ನಂದಪುರಿ ಸ್ವಾಮಿಗಳ ನೇತೃತ್ವದಲ್ಲಿ ಶ್ರೀ ಸಿದ್ದರಾಮಾನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಕಾರ್ಯಕ್ರಮದಲ್ಲಿ ನಾಡಿನ 150 ಕ್ಕೂ ಶ್ರೀಗಳು ಜನಪ್ರತಿನಿಧಿಗಳು,ಗಣ್ಯರು ಭಾಗವಹಿಸಲಿ ದ್ದಾರೆ.ಫೆ.1 ರಂದು ನಡೆಯುವ ನುಡಿನಮನ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು, ಜಿಲ್ಲಾ ಉಸ್ತುವಾರಿ ಸಚಿವ ರಾದ ಡಾ,ಶರಣಪ್ರಕಾಶ ಪಾಟೀಲ್, ರಾಜ್ಯ ಸಚಿವ ರಾದ ಸತೀಶ ಜಾರಕಿಹೊಳ್ಳಿ,ಭೈರಾತಿ ಸುರೇಶ, ಎನ್.ಎಸ್.ಬೋಸರಾಜು, ಮಾಜಿ ಸಂಸದರಾದ ವಿರೂಪಾಕ್ಷಪ್ಪ, ಸೇರಿದಂತೆ ರಾಜ್ಯದ ಸಚಿವರು, ಶಾಸಕರು,ಜನಪ್ರತಿನೀಧಿಗಳು,ಗಣ್ಯರು ಭಾಗವಹಿಸ ಲಿದ್ದಾರೆ ಅದ್ದರಿಂದ ತಾಲೂಕಿನ ಸಮುದಾಯದ ವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದರು. ಶ್ರೀ ಸಿದ್ದರಾಮಾನಂದಪುರಿ ಸ್ವಾಮೀಜಿಯವರ ಪುಣ್ಯಾರಾಧನೆ ಕಾರ್ಯಕ್ರಮದ ಭಿತ್ತಿ ಪತ್ರವನ್ನು ಬಿಡುಗಡೆಗೊಳಿಸಿದರು.ಶಿವಶಂಕರಗೌಡ ಬಾಗಲವಾಡ, ಭೀಮನಗೌಡ ಮುಸ್ಟೂರ್,ಈರಣ್ಣ ಮರ್ಲಟ್ಟಿ, ಮಹಾಂತೇಶ ಓಲೇಕಾರ್, ರಾಹುಲ್ ಕಲಂಗೇರ,ಅಜೇಯ್ ಕುಮಾರ್,ದುರುಗಪ್ಪ ತಡಕಲ್, ಚಂದ್ರಶೇಖರ್ ಬೈಲ್ ಮಾರ್ಚೆಡ್, ಮಾಳಿಂಗರಾಯ ಪಾತಾಪುರ, ಬಸವರಾಜ ಕನ್ನಾರಿ, ರವಿಕುಮಾರ ಇದ್ದರು.

## ಮನೆ ಬೀಗ ಮುರಿದು 3.72 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು




**ಕಲಬುರಗಿ,ಜ.28–**ಮನೆ ಬೀಗ ಮುರಿದು 3.72 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಗಣೇಶ ನಗರದಲ್ಲಿ ನಡೆದಿದೆ.

ಮಂಜುಳಾ ಸುನೀಲಕುಮಾರ ಬಿಲಗುಂದಿ ಎಂಬುವವರ ಮನೆ ಬೀಗ ಮುರಿದು ಕಳ್ಳರು 64 ಸಾವಿರ ರೂ.ಮೌಲ್ಯದ 8 ಗ್ರಾಂ.ಬಂಗಾರದ ಪದಕವುಳ್ಳ ಲಾಕೆಟ್, 96 ಸಾವಿರ ರೂ.ಮೌಲ್ಯದ 12 ಗ್ರಾಂ.ಬಂಗಾರದ ಲಾಕೆಟ್, 21 ಸಾವಿರ ರೂ.ಮೌಲ್ಯದ 3 ಗ್ರಾಂ.ಬಂಗಾರದ ಕಿವಿಯೋಲೆ, 21 ಸಾವಿರ ರೂ.ಮೌಲ್ಯದ 3 ಗ್ರಾಂ.ಬಂಗಾರದ ಉಂಗುರ ಮತ್ತು 1.70 ಲಕ್ಷ ರೂ.ನಗದು ಸೇರಿ 3.72 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.ಇವರು ಮನೆಗೆ ಬೀಗ ಹಾಕಿಕೊಂಡು ಕಾರ್ಯಕ್ರಮದ ಪ್ರಯುಕ್ತ ದೇವನ ತೆಗನೂರ ಗ್ರಾಮಕ್ಕೆ ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ. ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಮೊದಲನೇಯ ಪುಟದಿಂದ

ಫೆ.7ರಂದು ರಾಯಚೂರು ಜಿಲ್ಲಾ ಮಟ್ಟದ ಗ್ಯಾರಂಟಿ ಸಮಾವೇಶ

## ಗ್ಯಾರಂಟಿ ಸಮಾವೇಶ ಯಶಸ್ವಿಗೊಳಿಸಲು ಸಮಿತಿಯ ಅಧ್ಯಕ್ಷ ಪಾಮಯ್ಯ ಮುರಾರಿ ಸೂಚನೆ

ತಿಳಿದುಕೊಳ್ಳಬೇಕು. ಅದು ಇತರರಿಗೆ ಪ್ರೇರಣೆಯಾಗಬೇಕು. ಮುಖ್ಯವಾಗಿ ಗ್ಯಾರಂಟಿ ಯೋಜನೆಗಳ ಆಶಯ ಮತ್ತು ಆಯಾ ಯೋಜನೆಗಳ ಬಗ್ಗೆ ಜನತೆಗೆ ತಿಳಿಸಲು ಅರ್ಹರು ಈ ಯೋಜನೆಯ ವ್ಯಾಪ್ತಿಗೆ ಬರಬೇಕು ಎನ್ನುವ ಪ್ರಮುಖ ಉದ್ದೇಶದೊಂದಿಗೆ ಫೆ.07ರಂದು ಜಿಲ್ಲಾ ಮಟ್ಟದ ಗ್ಯಾರಂಟಿ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ವಿವಿಧೆಡೆ ಇರುವ ವಿವಿಧ ಗ್ಯಾರಂಟಿ ಯೋಜನೆಗಳ ಸಾಧಕ ಫಲಾನುಭವಿಗಳನ್ನು ಕೂಡಲೇ ಗುರುತಿಸಬೇಕು. ಪ್ರತಿ ತಾಲೂಕಿನಿಂದ ಕನಿಷ್ಠ 25 ಸಾಧಕ ಮಹಿಳಾ ಫಲಾನುಭವಿಗಳನ್ನು ಗುರುತಿಸಿ ಅವರಿಗೆ ಸಮಾವೇಶಕ್ಕೆ ಆಹ್ವಾನಿಸಿ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸುವ ಕಾರ್ಯ ಮಾಡಬೇಕು. ಈ ಕಾರ್ಯಕ್ಕೆ ಸಂಬಂಧಿಸಿದ ವಿವಿಧ ಇಲಾಖೆಗಳ ಅಧಿಕಾರಿಗಳು ಆದ್ಯತೆ ನೀಡಿ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಯಶೋಗಾಥೆಯ ಸಾಕ್ಷ್ಯಚಿತ್ರಗಳ ಪ್ರದರ್ಶನದ ಜೊತೆಗೆ ಸಾಧಕ ಫಲಾನುಭವಿಗಳ ಅಭಿಪ್ರಾಯದ ವಿಡಿಯೋ ಪ್ರದರ್ಶಿಸಬೇಕು. ಗ್ಯಾರಂಟಿ ಯೋಜನೆಗಳ ಯಶೋಗಾಥೆಯ ಕುರಿತು ನಾಟಕ ಪ್ರದರ್ಶನ ಸೇರಿದಂತೆ ಇತರೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲು ಅಗತ್ಯ ಕ್ರಮವಹಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಸ್ವ-ಸಹಾಯ ಗುಂಪುಗಳು ಉತ್ಪಾದಿಸುವ ಉತ್ಪನ್ನಗಳು ಸೇರಿದಂತೆ, ಸ್ಥಳೀಯ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಯೋಜನೆ ಮಾಡಬೇಕೆಂದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಉಪಾಧ್ಯಕ್ಷರಾದ ಶಂಕರಗೌಡ ತುರ್ವಿಹಾಳ, ಹನುಮಂತಪ್ಪ ಜಾಲಿಬೆಂಚಿ, ಸದಸ್ಯರಾದ ಲಕ್ಷ್ಮಣ ಜ್ಯೋತಿ, ಮೆಹೆಬೂಬ್ ಸಾಬ್, ವೆಂಕಟೇಶ, ಆದನಗೌಡ, ಹೆಚ್.ಬಸವರಾಜ್, ಶೇಖರಪ್ಪ ಯಾದವ್, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಸಿಡಾಕ್ ಜಂಟಿ ನಿರ್ದೇಶಕ ಜಿ.ಯು.ಹುಡೇದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್, ಜೆಸ್ಕಾಂ ಇಲಾಖೆಯ ಅಧಿಕಾರಿ ಚಂದ್ರಶೇಖರ ದೇಸಾಯಿ, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್ ಸಂಗೇಪಾಗ ಸೇರಿದಂತೆ ರಾಯಚೂರು, ಮಾನ್ವಿ, ಸಿಂಧನೂರ, ಮಸ್ಕಿ, ಲಿಂಗಸೂರು, ಸಿರವಾರ, ಅರಕೇರಾ ಮತ್ತು ದೇವದುರ್ಗ ತಾಲೂಕುಗಳ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಯಲ್ಲಿ ಇದ್ದರು.

## ವಾರ್ತಾ ಇಲಾಖೆಯ ಮಾಹಿತಿ ಪ್ರದರ್ಶನ ಮಳಿಗೆಗೆ ಚಾಲನೆ

ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಪ್ರಾಸ್ತಾವಿಕ ಮಾತನಾಡಿ, ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ 2025ರ ಆಗಸ್ಟ್ 16ರಂದು ನಡೆದ ಅನುಸೂಚಿತ ಜಾತಿ ಅನುಸೂಚಿತ ಪಂಗಡಗಳ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದಿಸಿದಂತೆ, 2025-26ನೇ ಸಾಲಿನ ಎಸ್ಸಿಪಿ ಟಿಎಸ್ಪಿ ಕ್ರಿಯಾಯೋಜನೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನರಿಗಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳ ಕುರಿತಂತೆ ರಾಜ್ಯದ ವಿವಿಧೆಡೆಯ ಆಯ್ದ ಬಸ್ ನಿಲ್ದಾಣಗಳಲ್ಲಿ ನಡೆದಂತೆ ಲಿಂಗಸೂರು ಬಸ್ ನಿಲ್ದಾಣದಲ್ಲಿ ಸಹ ಪ್ರಚಾರ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.ಜನವರಿ 30ರವರೆಗೆ ಪ್ರಚಾರ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಮಾಹಿತಿ ಪ್ರದರ್ಶನ ಮಳಿಗೆಯು ಲಿಂಗಸೂರು ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಜನವರಿ 28 ರಿಂದ ಜನವರಿ 30ರವರೆಗೆ ಇರುತ್ತದೆ. ಸಾರ್ವಜನಿಕರು ಜನಾಕರ್ಷಣೀಯ ಈ ಮಳಿಗೆಗೆ ಭೇಟಿ ನೀಡಿ ವಿವಿಧ ಗ್ಯಾರಂಟಿ ಯೋಜನೆಗಳು ಮತ್ತು ಎಸ್ಸಿಪಿ ಹಾಗೂ ಟಿಎಸ್ಪಿ ಯೋಜನೆಗಳ ಅನುಷ್ಠಾನದ ಯಶೋಗಾಥೆಯ ಚಿತ್ರಣವನ್ನು ವೀಕ್ಷಣೆ ಮಾಡಬಹುದಾಗಿದೆ ಎಂದು ಇದೆ ವೇಳೆ ಗವಿಸಿದ್ದಪ್ಪ ಅವರು ಲಿಂಗಸೂರು ತಾಲೂಕಿನ ಜನತೆಯಲ್ಲಿ ಮನವಿ ಮಾಡಿದರು.ಫೆ.1ರಿಂದ ದೇವದುರ್ಗದಲ್ಲಿ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ರೂಪಿಸಿರುವ ಈ ಮಾಹಿತಿ ಪ್ರದರ್ಶನ ಮಳಿಗೆಯು ಫೆ.1ರಿಂದ ಫೆ.3ರವರೆಗೆ ದೇವದುರ್ಗ ಪಟ್ಟಣದ ಕೇಂದ್ರ ಬಸ್ ನಿಲ್ದಾಣದಲ್ಲಿ ಅಳವಡಿಸಲಾಗುವುದು ಎಂದು ಗವಿಸಿದ್ದಪ್ಪ ಅವರು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಭೂಪನಗೌಡ ಕರಡಕಲ್, ಟಿಎಪಿಸಿಎಂಎಸ್‌ನ ಅಧ್ಯಕ್ಷರಾದ ಶಶಿಧರ ಪಾಟೀಲ, ಲಿಂಗಸೂರ ಕೇಂದ್ರ ಬಸ್ ನಿಲ್ದಾಣದ ಸಂಚಾರಿ ನಿಯಂತ್ರಕರಾದ ಸಂಗಪ್ಪ, ಸಾರಿಗೆ ನಿಯಂತ್ರಕರಾದ ಮೆಹಬೂಬಿ, ಬಸವಂತಪ್ಪ, ಅಮರಪ್ಪ, ಬಸಣ್ಣ ಸೇರಿದಂತೆ ಸಾರ್ವಜನಿಕರು, ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಮತ್ತು ಇತರರು ಇದ್ದರು.

## ಡಿಸಿಎಂ ಪವಾರ್ ದುರ್ಮರಣ

ಅವರು ಸುನೇತ್ರಾ ಪವಾರ್ ಅವರನ್ನು ವಿವಾಹವಾಗಿದ್ದರು. ಅವರಿಗೆ ಜಯ್ ಮತ್ತು ಪಾರ್ಥ್ ಪವಾರ್ ಎಂಬ ಇಬ್ಬರು ಗಂಡು ಮಕ್ಕಳಿದ್ದಾರೆ. ಬಾರಾಮತಿಗೆ ಅಮಿತ್ ಶಾ ಭೇಟಿ:ವಿಮಾನ ಅಪಘಾತ ಸುದ್ದಿ ತಿಳಿದ ಕೂಡಲೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಬಾರಾಮತಿಗೆ ತೆರಳಿದ್ದಾರೆ. ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಮತ್ತು ಇತರ ಐವರು ಸಾವನ್ನಪ್ಪಿದ ಭೀಕರ ವಿಮಾನ ಅಪಘಾತದಿಂದ ದಿಗ್ಭ್ರಮೆ ಗೊಂಡ ಕೇಂದ್ರ ಗೃಹ ಸಚಿವರು ಇಂದು ಬಾರಾಮತಿಗೆ ತೆರಳಿದರು.

ಅಜಿತ್ ಪವಾರ್ ಅವರ ಪತ್ನಿ ಮತ್ತು ರಾಜ್ಯಸಭಾ ಸದಸ್ಯೆ ಸುನೇತ್ರಾ ಪವಾರ್, ಅವರ ಪುತ್ರ ಪಾರ್ಥ್ ಪವಾರ್ ಮತ್ತು ಎನ್ ಸಿಪಿ (ಎಸ್ ಪಿ) ಸಂಸದೆ ಸುಪ್ರಿಯಾ ಸುಳೆ ಶೀಘ್ರದಲ್ಲೇ ಮುಂಬೈಗೆ ತೆರಳಲಿದ್ದಾರೆ.

ಏತನ್ಮಧ್ಯೆ, ಮಹಾರಾಷ್ಟ್ರ ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಸಹ ಬಾರಾಮತಿಗೆ ಆಗಮಿಸಲಿದ್ದಾರೆ. ವಿಮಾನ ಅಪಘಾತದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಲ್ಲಾ ಅಧಿಕೃತ ಕಾರ್ಯಕ್ರಮಗಳನ್ನು ರದ್ದುಗೊಳಿಸಿದೆ.

ರನ್ ವೇಗೆ 100 ಅಡಿ ಮುನ್ನ ಬಿದ್ದ ವಿಮಾನ:ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರನ್ನು ಕರೆದೊಯ್ಯುತ್ತಿದ್ದ ವಿಮಾನ ಅಪಘಾತಕ್ಕೀಡಾಗುವ ಕೆಲವೇ ನಿಮಿಷಗಳ ಮೊದಲು, ರನ್ ವೇ ಕಡೆಗೆ ಹಾರುತ್ತಿದ್ದು, ಅದನ್ನು ಸಮೀಪಿಸುವ ಮೊದಲು 100 ಅಡಿ ಕೆಳಗೆ ಬಿತ್ತು ಎಂದು ಪ್ರತ್ಯಕ್ಷದರ್ಶಿಯೊಬ್ಬರು ತಿಳಿಸಿದ್ದಾರೆ.

ಪ್ರಧಾನಿ ಸೇರಿ ಹಲವು ಗಣ್ಯರು ಸಂತಾಪ:ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ದುರಂತ ಸಾವಿನ ನಂತರ, ಪ್ರಧಾನಿ ನರೇಂದ್ರ ಮೋದಿ ಅವರು ಎಕ್ಸ್ ಖಾತೆಯಲ್ಲಿ ಸಂತಾಪ ವ್ಯಕ್ತಪಡಿಸಿದ್ದಾರೆ, "ಮಹಾರಾಷ್ಟ್ರದ ಬಾರಾಮತಿಯಲ್ಲಿ ಸಂಭವಿಸಿದ ಭೀಕರ ವಿಮಾನ ಅಪಘಾತದಿಂದ ದುಃಖಿತನಾಗಿದ್ದೇನೆ. ಅಪಘಾತದಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಎಲ್ಲರಿಗೂ ನನ್ನ ಸಂತಾಪಗಳು. ಈ ತೀವ್ರ ದುಃಖದ ಕ್ಷಣದಲ್ಲಿ ದುಃಖತಪ್ತ ಕುಟುಂಬಗಳಿಗೆ ಶಕ್ತಿ ಮತ್ತು ಧೈರ್ಯಕ್ಕಾಗಿ ಪ್ರಾರ್ಥಿಸುತ್ತೇನೆ." ಎಂದು ಹೇಳಿದ್ದಾರೆ. ಇದೇ ವೇಳೆ ರಕ್ಷಣಾ ಸಚಿವ ರಾಜನಾಥ್ ಸಿಂಗ್, "ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಅಕಾಲಿಕ ನಿಧನದ ಸುದ್ದಿ ತಿಳಿದು ತೀವ್ರ ಆಘಾತ ಮತ್ತು ನೋವಾಗಿದೆ. ತಮ್ಮ ಸುದೀರ್ಘ ಸಾರ್ವಜನಿಕ ಜೀವನದುದ್ದಕ್ಕೂ ಅವರು ಮಹಾರಾಷ್ಟ್ರದ ಅಭಿವೃದ್ಧಿ ಮತ್ತು ಸಮೃದ್ಧಿಗೆ ಬದ್ಧರಾಗಿದ್ದರು. ಅವರು ಜನರ ಬಗ್ಗೆ ಸಹಾನುಭೂತಿ ಮತ್ತು ಸಾರ್ವಜನಿಕ ಸೇವೆಗೆ ಅವರ ಅಚಲ ಸಮರ್ಪಣೆಗೆ ಹೆಸರುವಾಸಿಯಾಗಿದ್ದರು. ಅವರ ಕುಟುಂಬ, ಹಿತೈಷಿಗಳು ಮತ್ತು ಅಭಿಮಾನಿಗಳಿಗೆ ನನ್ನ ಹೃತ್ಪೂರ್ವಕ ಸಂತಾಪವನ್ನು ವ್ಯಕ್ತಪಡಿಸುತ್ತೇನೆ." ಎಂದು ಹೇಳಿದ್ದಾರೆ.ಮೋದಿ ಸೇರಿ ಗಣ್ಯರ ಸಂತಾಪ-ವಿಮಾನ ದುರಂತದಲ್ಲಿ ದುರ್ಮರಣಕ್ಕೀಡಾದ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ನಿಧನಕ್ಕೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಮೋದಿ ಬಾರಾಮತಿಯಲ್ಲಿ ಸಂಭವಿಸಿರುವ ಭೀಕರ ವಿಮಾನ ಅಪಘಾತದಿಂದ ದುಃಖಿತನಾಗಿದ್ದೇನೆ.ಅಪಘಾತದಲ್ಲಿ ಪ್ರೀತಿ ಪಾತ್ರರನ್ನು ಕಳೆದುಕೊಂಡ ಎಲ್ಲರೊಂದಿಗೆ ನಾನು ಇದ್ದೇನೆ. ಈ ದುಃಖವನ್ನು ಭರಿಸಲು ಕುಟುಂಬ ಸದಸ್ಯರಿಗೆ ಶಕ್ತಿ ನೀಡಲೆಂದು ದೇವರಲ್ಲಿ ಪ್ರಾರ್ಥಿಸಿದ್ದಾರೆ.ಅಜಿತ್ ಪವಾರ್ ಅವರು ಮಹಾರಾಷ್ಟ್ರ ಉಪಮುಖ್ಯಮಂತ್ರಿಯಾಗಿ ಜನನಾಯಕರಾಗಿ ಬೇರುಮಟ್ಟದಿಂದ ಸಂಪರ್ಕ ಹೊಂದಿದ್ದರು. ರಾಜ್ಯದ ಜನರಿಗೆ ಸೇವೆ ಸಲ್ಲಿಸಲು ಮುಂಚೂಣಿಯಲ್ಲಿದ್ದರು. ಬಡವರು, ದೀನದಲಿತರ ಸಬಲೀಕರಣದ ಬಗ್ಗೆ ಅವರ ಉತ್ಸಾಹ ಗಮನಾರ್ಹವಾಗಿತ್ತು. ಅವರ ಅಕಾಲಿಕ ನಿಧನ ತುಂಬಾ ಆಘಾತಕಾರಿ ಮತ್ತು ದುಃಖಕರವಾಗಿದೆ ಎಂದು ಕಂಬನಿ ಮಿಡಿದಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ತಮ್ಮ ಎಕ್ಸ್ ಖಾತೆಯಲ್ಲಿ ಅಜಿತ್ ಪವಾರ್ ನಿಧನಕ್ಕೆ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಕಳೆದ ಮೂರುವರೆ ದಶಕಗಳಲ್ಲಿ ಅಜಿತ್ ಪವಾರ್ ಮಹಾರಾಷ್ಟ್ರದ ಪ್ರತಿಯೊಂದು ವರ್ಗದ ಕಲ್ಯಾಣಕ್ಕಾಗಿ ತಮ್ಮನ್ನು ತಾವು ಸಮರ್ಪಿಸಿಕೊಂಡಿದ್ದರು. ಅವರ ನಿಧನದಿಂದ ಎನ್‌ಡಿಎ ಮೈತ್ರಿಕೂಟ ಮತ್ತು ತಮಗೆ ವ್ಯಕ್ತಿತ್ವವಾಗಿ ನಷ್ಟವಾಗಿದೆ ಎಂದು ಹೇಳಿದ್ದಾರೆ.ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಅಜಿತ್ ಪವಾರ್ ನಿಧನಕ್ಕೆ ದಿಗ್ಭ್ರಮೆ ವ್ಯಕ್ತಪಡಿಸಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಪವಾರ್ ಅವರು ತಮ್ಮ ಸುದೀರ್ಘ ಸಾರ್ವಜನಿಕ ಜೀವನದುದ್ದಕ್ಕೂ ಮಹಾರಾಷ್ಟ್ರ ಅಭಿವೃದ್ಧಿಗೆ ಬದ್ಧರಾಗಿದ್ದರು ಎಂದಿದ್ದಾರೆ.

ಅಜಿತ್ ಪವರ್ ನಿಧನಕ್ಕೆ ಗಣ್ಯರ ಸಂತಾಪ-ಮಹಾರಾಷ್ಟ್ರದ ಪುಣೆಯಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲಿ ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ರಾಜ್ಯದ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ ಈ ಸಂಬಂಧ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರು ವಿಮಾನ ಅಪಘಾತದ ದುರಂತದಲ್ಲಿ ನಿಧನದ ಸುದ್ದಿ ಕೇಳಿ ತೀವ್ರ ದುಃಖಿತನಾಗಿದ್ದೇನೆ. ಅವರ ನಿಧನವು ಸಾರ್ವಜನಿಕ ಜೀವನಕ್ಕೆ ಅಪಾರ ನಷ್ಟವಾಗಿದೆ. ಅವರ ಕುಟುಂಬ, ಸಹೋದ್ಯೋಗಿಗಳು ಮತ್ತು ಬೆಂಬಲಿಗರಿಗೆ ನನ್ನ ಹೃತ್ಪೂರ್ವಕ ಸಂತಾಪಗಳು. ಅವರ ಆತ್ಮಕ್ಕೆ ಶಾಂತಿ ಸಿಗಲಿ, ಮತ್ತು ಅವರ ಪ್ರೀತಿಪಾತ್ರರು ಈ ನಷ್ಟವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಪಡೆಯಲಿ ಎಂದು ಹೇಳಿದ್ದಾರೆ.ಕೇಂದ್ರ ಸಚಿವ ಎಚ್. ಡಿ. ಕುಮಾರ ಸ್ವಾಮಿ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೇರಿದಂತೆ ಪಕ್ಷಾತೀತವಾಗಿ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

# ಶ್ರೀಮನ್ ಮಧ್ವಾಚಾರ್ಯರ 710 ನೇ ಜಯಂತಿ ಆಚರಣೆ

ಯುವಮಾರ್ಗ ಸುದ್ದಿ



**ಮಾನ್ವಿ,ಜ.28–** ಪಟ್ಟಣದ ಶ್ರೀ ಜಗನ್ನಾಥ ದಾಸರ ಸನ್ನಿಧಾನದಲ್ಲಿ ಶ್ರೀಮನ್ ಮಧ್ವಾಚಾರ್ಯರ 710 ನೇ ಜಯಂತಿ ಅಂಗವಾಗಿ ಮಧ್ವನವಮಿಯನ್ನು ಭಕ್ತಿ ಭಾವದಿಂದ ಆಚರಿಸಲಾಯಿತು

ಬೆಳಿಗ್ಗೆ 5ಕ್ಕೆ ಸುಪ್ರಭಾತ, ಹರಿಕಥಾಮೃತಸಾರ ಪಾರಾಯಣ, ಪವಮಾನ ಹೋಮ , ರಾಯರ ಅಷ್ಟೋತ್ತರ, ಶ್ರೀ ಜಗನ್ನಾಥ ದಾಸರ ಕಂಬ ಸ್ಥಂಭಕ್ಕೆ ನಿರ್ಮಾಲ್ಯ ವಿಸರ್ಜನೆ,ಪ್ರತಿಮಾಪೂಜೆ ಮತ್ತು ಫಲ ಪಂಚಾಮೃತ ಸೇವೆ ಅಷ್ಟೋತ್ತರ ನೆರವೇರಿಸಲಾಯಿತು. ಶ್ರೀ ಮನ್ ಮಧ್ವಾಚಾರ್ಯರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಪಟ್ಟಣದ ರಾಜಬೀದಿಯಲ್ಲಿ ದಾಸಾರ್ಯ ಮಹಿಳಾ ಭಜನ ಮಂಡಳಿ ಹಾಗೂ ಪವನ ಭಜನಾ ಮಂಡಳಿಗಳಿಂದ ತಾರತಮ್ಯ ಭಜನೆಯೊಂದಿಗೆ ಪಲ್ಲಕ್ಕಿ ಶ್ರೀ ಮಧ್ವಾಚಾರ್ಯರ ಭಾವಚಿತ್ರ, ಸರ್ವ ಮೂಲ ಗ್ರಂಥಗಳ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಬ್ರಾಹ್ಮಣ ಸಮಾಜದ ಅಧ್ಯಕ್ಷ ಮುದ್ದುರಂಗರಾವ ಮುತಾಲಿಕ,ಸೇರಿದಂತೆ ಟಿ.ಭೀಮಸೇನರಾವ,ನರಸಿಂಹಾಚಾರ್ಯ ಜಾನೇಕಲ್,ಜಗನ್ನಾಥ ರಾಮಪೂರ,ಶ್ರೀಧರ ಮಾಸ್ಟರ್,ನರಸಿಂಹ ಅಪೂಟ್,ಪ್ರಲ್ಹಾದ ಕುರ್ಡಿ,ಜಯಚಾರ್ಯ ಮಠದ್,ಗೋಪಾಲ ಕಿರಸೂರ,ಜಗನ್ನಾಥ ಪುರೋಹಿತ,ಗಿರೀಶ ತುರ್ವಿಹಾಳ,ಮ್ಯಾನೇಜರ ಶ್ರೀನಿವಾಸರಾವ್ ಕೊರ್ಲಹಳ್ಳಿ, ಅರ್ಚಕ ಪ್ರಲ್ಹಾದಾಚಾರ್ಯ ಸೇರಿದಂತೆ ತಾಲೂಕ ಬ್ರಾಹ್ಮಣ ಸಮಾಜ ಹಾಗೂ ಅರ್ಯುವೈಶ್ಯ ಸಮಾಜದವರು ಸೇರಿದಂತೆ ಭಕ್ತರು ಭಾಗವಹಿಸಿದರು.

## ಶುಲ್ಕ ಮರುಪಾವತಿಗೆ ತಾಂತ್ರಿಕ ಕಾರಣ ಬಗೆಹರಿಸಲು ಅವಕಾಶ

**ರಾಯಚೂರು,ಜ.28–**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2020-21, 2021-22, 2022-23, 2023-24, 2024-25 ಮತ್ತು 2025-26ನೇ ಸಾಲಿನ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮಕ್ಕಾಗಿ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಿರುವ ಕೆಲವೊಂದು ವಿದ್ಯಾರ್ಥಿಗಳಿಗೆ ತಾಂತ್ರಿಕ ಕಾರಣಗಳಿಂದ ವಿದ್ಯಾರ್ಥಿವೇತನ ಅಥವಾ ಶುಲ್ಕ ಮರುಪಾವತಿ ಮಾಡಲು ಸಾಧ್ಯವಾಗುತ್ತಿಲ್ಲ.

ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಕೊಳ್ಳದೆ ಇರುವುದು. ವಿದ್ಯಾರ್ಥಿಗಳ ಶೈಕ್ಷಣಿಕ ದತ್ತಾಂಶದಲ್ಲಿ ಹಾಗೂ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ ನಮೂದಿಸಿರುವ ಹೆಸರಿಗೂ ವ್ಯತ್ಯಾಸವಿರುವುದು. ಕೌನ್ಸೆಲಿಂಗ್ ಕೋರ್ಸ್ಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಕೌನ್ಸೆಲಿಂಗ್ ದತ್ತಾಂಶ ನಮೂದಿಸದೇ ಇರುವುದು. ವಿದ್ಯಾರ್ಥಿಗಳ ಹಿಂದಿನ ಶೈಕ್ಷಣಿಕ ವರ್ಷದ ದತ್ತಾಂಶವನ್ನು ವಿಶ್ವವಿದ್ಯಾಲಯಗಳು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದೊಂದಿಗೆ ಹಂಚಿಕೊಳ್ಳದೇ ಇರುವುದು.

ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಿ, ಮಾಹಿತಿಯನ್ನು ಅಪ್‌ಡೇಟ್ ಮಾಡಲು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ವಿದ್ಯಾರ್ಥಿಗಳ ಲಾಗಿನ್, ತಾಲ್ಲೂಕು/ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಲಾಗಿನ್‌ನಲ್ಲಿ ಅವಕಾಶ ನೀಡಲಾಗಿರುತ್ತದೆ.

ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ತಿಳಿಸಿದೆ. ಒಂದು ವೇಳೆ ದಿನಾಂಕ 30-01-2026ರ ಒಳಗಾಗಿ ವಿದ್ಯಾರ್ಥಿಗಳು ತಮ್ಮ ಮಾಹಿತಿಯನ್ನು ಅಪ್‌ಡೇಟ್ ಮಾಡದೇ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ರಾಯಚೂರು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪೌರ ಕಾರ್ಮಿಕರಿಗೆ ಸ್ವಚ್ಛತೆಯ ಪಾಠ ಮಾಡಿದ ಆಯುಕ್ತರು

## ಉತ್ಸವದಲ್ಲಿ ರಾಯಚೂರು ಸಿಟಿ ಸುಂದರವಾಗಿ ಕಾಣಲಿ: ಜುಬಿನ್ ಮೊಹಪಾತ್ರ




ಯುವಮಾರ್ಗ ಸುದ್ದಿ

**ರಾಯಚೂರು,ಜ.28–**ಉತ್ಸವವು ಯಶಸ್ವಿಯಾಗಿ ನಡೆಯುವ ನಿಟ್ಟಿನಲ್ಲಿ ರಾಯಚೂರು ಸಿಟಿಯು ಸುಂದರವಾಗಿ ಕಾಣಬೇಕು. ಈ ದಿಶೆಯಲ್ಲಿ ಯೋಚಿಸಿ ಪ್ರತಿಯೊಬ್ಬ ಪೌರ ಕಾರ್ಮಿಕರು ಸ್ವಚ್ಛತಾ ಕಾರ್ಯದಲ್ಲಿ ಸಕ್ರಿಯ ಭಾಗಿಯಾಗಬೇಕು ಎಂದು ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮೋಹಪಾತ್ರ ಅವರು ಹೇಳಿದರು. ನಗರದ ಜೈಲ್‌ಖಾನ್ ಬಳಿಯಲ್ಲಿರುವ ಮಹಿಳಾ ಸಮಾಜ ಮೈದಾನದಲ್ಲಿ ಜನವರಿ 28ರಂದು ಪೌರ ಕಾರ್ಮಿಕರ ಸಭೆ ನಡೆಸಿ ಅವರು ಮಾತನಾಡಿದರು.

ಶುಚಿತ್ವ ಇದ್ದಲ್ಲಿ, ಶಿಸ್ತು ಇದ್ದಲ್ಲಿ ಶಾಂತಿ ಇರುತ್ತದೆ. ಈ ದಿಶೆಯಲ್ಲಿ ನಾವೆಲ್ಲರೂ ಯೋಚಿಸಿ ಉತ್ಸವದ ನಿಗದಿಯಾದ ಈ ಸಂದರ್ಭದಲ್ಲಿ ನಮ್ಮ ನಮ್ಮ ಮನೆ, ಮನೆಯ ಸುತ್ತಲಿನ ಪರಿಸರ, ರಸ್ತೆ, ಗಟಾರು, ಸಾರ್ವಜನಿಕ ಸ್ಥಳಗಳು ಸೇರಿದಂತೆ ವಿವಿಧೆಡೆಯಲ್ಲಿ ಶುಚಿತ್ವಕ್ಕೆ ಒತ್ತು ಕೊಡಬೇಕು. ರಾಯಚೂರು ಜಿಲ್ಲಾ ಉತ್ಸವಕ್ಕೆ ಅತಿಥಿಗಳಾಗಿ ಆಮಿಸುವ ಜನತೆಗೆ ರಾಯಚೂರು ನಗರವು ಸುಂದರವಾಗಿ ಕಾಣುವಂತಾಗಬೇಕು. ಜನತೆಗೆ ಸ್ವಚ್ಛತೆಯ ಸಂದೇಶ ರವಾನೆಯಾಗಬೇಕು. ರಾಯಚೂರ ನಗರವನ್ನು ಸ್ವಚ್ಚ ನಗರ ವೆಂದು ಜನರು ಕೊಂಡಾಡುವಂತೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದು ಆಯುಕ್ತರು ಪೌರ ಕಾರ್ಮಿಕರಿಗೆ ಸ್ವಚ್ಛತೆಯ ಪಾಠ ಮಾಡಿದರು.

ರಾಯಚೂರು ಉತ್ಸವಕ್ಕೆ ಇನ್ನು ಒಂದು ವಾರ ಮಾತ್ರ ಬಾಕಿ ಇದೆ. ಈಗಾಗಲೇ ನಗರದಲ್ಲಿ ಕಸ ಸಂಗ್ರಹ ಸ್ಥಳಗಳಲ್ಲಿ ನಿತ್ಯ ಕಸ ವಿಲೆವಾರಿ ನಡೆಯುತ್ತಿದೆ. ನಿತ್ಯ ಮನೆ ಮನೆ ಕಸ ಸಂಗ್ರಹ, ಕಾರ್ಖಾನೆ, ಆಸ್ಪತ್ರೆ ಸೇರಿದಂತೆ ಎಲ್ಲಾ ಕಡೆಗಳಲ್ಲಿ ಕಸ ವಿಲೇವಾರಿ ನಡೆಯುತ್ತಿದೆ. ಬೇರೆ ಬೇರೆ ಕಡೆಗಳಲ್ಲಿ ಸ್ವಚ್ಚತೆ ಕಾಣಲಾರಂಭಿಸಿದೆ. ಈ ಕೆಲಸ ನಿರಂತರ ಮುಂದುವರೆಯಬೇಕು ಎಂದು ಸೂಚನೆ ನೀಡಿದರು.ಉತ್ಸವಕ್ಕೂ ಮುಂಚಿತವಾಗಿ ಪ್ರತಿಯೊಬ್ಬರು ಸ್ವಚ್ಚತೆಯ ಕಡೆಗೆ ಮೊದಲ ಆದ್ಯತೆ ನೀಡಬೇಕು. ರಾಜ್ಯ, ಅಂತಾರಾಜ್ಯ, ಮಟ್ಟದ ಕಲಾವಿದರು ಮೊದಲ ಬಾರಿಗೆ ಜಿಲ್ಲೆಗೆ ಆಗಮಿಸಲಿದ್ದಾರೆ. ಅವರಿಗೆ ರಾಯಚೂರು ಸ್ವಚ್ಚ ನಗರವೆಂದು ತೋರಿಸಿಕೊಡಬೇಕಾಗಿದೆ. ಪ್ರಮುಖವಾಗಿ ಮುಖ್ಯ ರಸ್ತೆಗಳು, ಮುಖ್ಯ ರಸ್ತೆಗಳಲ್ಲಿರುವ ರಾಜ ಕಾಲುವೆಗಳಿಂದ ದುರ್ವಾಸನೆ ಬೀರದಂತೆ ಬೀಚಿಂಗ್ ಪೌಡರ್ ಸಿಂಪಡಣೆ ಮಾಡಬೇಕು. ಯಾವುದೇ ಕಡೆಗಳಲ್ಲಿ ಕಸ ಕಾಣಿಸಬಾರದು. ಉತ್ಸವ ಕಾರ್ಯಕ್ರಮಗಳು ನಿಗದಿಯಾದ ಶ್ರೀ ಪಂಡಿತ ಸಿದ್ಧರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರ, ಜೈಲ್ ಖಾನ್ ಬಳಿಯ ಮಹಿಳಾ ಸಮಾಜ ಆವರಣ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯ, ವಾಲ್‌ಕಟ್ ಮೈದಾನ, ಜಿಲ್ಲಾ ಕ್ರೀಡಾಂಗಣದ ಒಳಾಂಗಣ ಮತ್ತು ಹೊರಾಂಗಣದಲ್ಲಿ ಈಗಿನಿಂದಲೇ ಶುಚಿತ್ವ ಕಾರ್ಯ ನಡೆಯಬೇಕು. ಈ ಎಲ್ಲ ಕಡೆಗೆ ಸಹ ಪ್ರತಿ ದಿನ ಶುಚಿತ್ವ ಕಾರ್ಯವಾಗಬೇಕು ಎಂದು ಆಯುಕ್ತರು ಸೂಚನೆ ನೀಡಿದರು. ಬೇರೆ ಬೇರೆ ಕಡೆಗಳಲ್ಲಿ ಫಾಗಿಂಗ್ ಮಾಡಬೇಕು. ಎಲ್ಲೆಂದರಲ್ಲಿ ಕಸ ಎಸೆಯದಂತೆ ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಮೈಸೂರು, ಮಂಗಳೂರು ಸೇರಿದಂತೆ ಕೆಲ ನಗರಗಳು ಸ್ವಚ್ಚತೆಗೆ ಹೆಸರುವಾಸಿಯಾಗಿದೆ. ಅವುಗಳ ಸಾಲಿನಲ್ಲಿ ರಾಯಚೂರು ಸಹ ಸೇರುವ ಹಾಗೆ ರಾಯಚೂರನ್ನು ಸ್ವಚ್ಚ ನಗರವೆಂದು ತೋರಿಸಿಕೊಡಲು ರಾಯಚೂರು ಉತ್ಸವ ಒಂದು ಅವಕಾಶವಾಗಿದ್ದು, ಇದನ್ನು ಸವಾಲಾಗಿ ಸ್ವೀಕರಿಸಿ ಕೆಲಸ ಮಾಡಬೇಕು. ಪ್ರತಿಯೊಬ್ಬರು ಸ್ವಚ್ಛತೆಯ ಕಾರ್ಯವನ್ನು ನಮ್ಮ ಮನೆಯ ಕೆಲಸವೆಂದು ಭಾವಿಸಿ ಜವಾಬ್ದಾರಿ ತೆಗೆದುಕೊಳ್ಳಬೇಕು. ಆಗ ಮಾತ್ರ ಸ್ವಚ್ಚ ನಗರ ಸಾಲಿನಲ್ಲಿ ನಮ್ಮ ಜಿಲ್ಲೆ ಗುರುತಿಸಲು ಸಾಧ್ಯವಾಗುತ್ತದೆ ಎಂದರು.

ಪೌರ ಕಾರ್ಮಿಕರ ಮೇಲೆ ಸರಿಯಾಗಿ ಮೇಲ್ವಿಚಾರಣೆ ಮಾಡಲು ಇದೆ ವೇಳೆ ಆಯುಕ್ತರು, ಪಾಲಿಕೆಯ ಪರಿಸರ ಅಭಿಯಂತರರು ಮತ್ತು ಪರಿಸರ ನಿರೀಕ್ಷರಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಪರಿಸರ ವಿಭಾಗದ ಅಭಿಯಂತರರಾದ ಜೈಪಾಲ್ ರೆಡ್ಡಿ, ಉಪ ಆಯುಕ್ತರಾದ ಮಲ್ಲಿಕಾರ್ಜುನ ಸೇರಿದಂತೆ ಪೌರ ಕಾರ್ಮಿಕರು, ಪಾಲಿಕೆಯ ವಿವಿಧ ಅಧಿಕಾರಿಗಳು ಇದ್ದರು.

# ಆಡಳಿತ-ವಿಪಕ್ಷ ವಾಕ್ಸಮರ ಮೇಲ್ಮನೆ ಕಲಾಪಕ್ಕೆ ಅಡ್ಡಿ



ಬೆಂಗಳೂರು,ಜ.28-ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರ ಭಾಷಣ ಕುರಿತು ಖಂಡನೆ ವ್ಯಕ್ತಪಡಿಸಿದ ಸಂಬಂಧ ಆಡಳಿತ ಪಕ್ಷವು ವಿಷಾದ ವ್ಯಕ್ತಪಡಿಸಬೇಕು ಎಂದು ಪ್ರತಿಪಕ್ಷ ಸದಸ್ಯರು, ಖಂಡನೆ ಬಿಟ್ಟು ವಂದನಾ ನಿರ್ಣಯದ ಮೇಲೆ ಚರ್ಚೆಗೆ ಆಡಳಿತ ಪಕ್ಷ ಸದಸ್ಯರು ಬಿಗಿಪಟ್ಟು ಮುಂದುವರೆಸಿದ್ದರಿಂದ ಮೇಲ್ಮನೆಯಲ್ಲಿ ಮಾತಿನ ಚಕಮಕಿ ಗದ್ದಲ ನಡೆದು ಮಧ್ಯಾಹ್ನಕ್ಕೆ ಕಲಾಪವನ್ನು ಮುಂದೂಡಲಾಯಿತು.

ಕಲಾಪದಲ್ಲಿ ವಂದನಾ ನಿರ್ಣಯದ ಮೇಲೆ ನಿನ್ನೆ ಕಾಂಗ್ರೆಸ್ ನ ಐವಾನ್ ಡಿಸೋಜಾ ಚರ್ಚೆ ಅರಂಭಿಸಿದ್ದರು.ಇಂದು ಬೇರೆ ಸದಸ್ಯರು ಮುಂದುವರೆಸಲು ಹೋದಾಗ ರಾಜ್ಯಪಾಲರ ಭಾಷಣ ಕುರಿತು ಖಂಡನೆ ವ್ಯಕ್ತಪಡಿಸಿದ ಸಂಬಂಧ ಆಡಳಿತ ಪಕ್ಷವು ವಿಷಾದ ವ್ಯಕ್ತಪಡಿಸಬೇಕು ಎಂದು ಪ್ರತಿಪಕ್ಷದ ಸದಸ್ಯರು ಪಟ್ಟು ಹಿಡಿದ ಸದನದ ಬಾವಿಗಿಳಿದು ಧರಣಿ ನಡೆಸಿದರು.

ರಾಜ್ಯಪಾಲರ ಭಾಷಣ ಸಂಬಂಧ ವಂದನಾ ನಿರ್ಣಯವೋ ಖಂಡನಾ ನಿರ್ಣಯವೋ ಎಂಬುದರ ಬಗ್ಗೆ ರಾಜ್ಯ ಸರ್ಕಾರ ದ್ವಂದ್ವ ನಿಲುವು ತಳೆದಿದೆ.. ಈ ಬಗ್ಗೆ ಆಗಿರುವ ಗೊಂದಲವನ್ನ ನಿವಾರಿಸಿದ ಬಳಿಕವಷ್ಟೇ ಚರ್ಚೆ ನಡೆಸಬೇಕು ಎಂದು ವಿಪಕ್ಷ ಸದಸ್ಯರು ಪ್ರತಿಭಟಿಸಿದರು.

ಸದನದ ಬಾವಿಗಿಳಿದು ಧರಣಿ ಆರಂಭಿಸುತ್ತಿದ್ದಂತೆ ಸಭಾಪತಿ ಬಸವರಾಜ ಹೊರಟ್ಟಿ ಅವರು ಮಾತನಾಡಿ ಭಾವಿಯಲ್ಲಿ ನಿಂತು ಧಿಕ್ಕಾರ ಕೂಗಬೇಡಿ. ಹಾಗೆ ಮಾಡಿದರೆ ಸದನದಿಂದ ಹೊರ ಹಾಕುತ್ತೇನೆ ಎಂದು ಎಚ್ಚರಿಸಿದರು. ಇದಕ್ಕೆ ಪ್ರತಿಕಿಯಿಸಿದ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನಮ್ಮನ್ನ ಹೊರ ಹಾಕುವುದಾದೆ ಹಾಕಿ,ಅದೂ ಆಗಲಿ. ನಮ್ಮ ಎರಡು ಬೇಡಿಕೆ ಈಡೇರೋವರೆಗೂ ಧರಣಿ ಮುಂದುವರೆಸುತ್ತೇವೆ. ರಾಜ್ಯಪಾಲರು ಭಾಷಣ ಮಾಡಿಲ್ಲ ಎಂದಾದ ಮೇಲೆ, ವಂದನೆ ನಿರ್ಣಯ ಹೇಗಾಗಲಿದೆ ? ನೀವು ಮಾಡುತ್ತಿರುವುದು ಖಂಡನಾ ನಿರ್ಣಯವೋ? ವಂದನಾ ನಿರ್ಣಯವೋ ಮೊದಲು ತಿಳಿಸಿ. ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರವೆಸಗಿದ ಸಚಿವ ಆರ್.ಬಿ.ತಿಮ್ಮಾಪುರ್ ಅವರು ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಹೊರಟ್ಟಿ

ರಾಷ್ಟಪತಿ ಹಾಗೂ ರಾಜ್ಯಪಾಲರನ್ನ ಟೀಕೆಗೆ ಒಳಪಡಿಸುವಂತಿಲ್ಲ. ಇದು ಎರಡೂ ಪಕ್ಷದ ಸದಸ್ಯರಿಗೆ ಅನ್ವಯಿಸಲಿದೆ. ಇದು ನಿಯಮಗಳಲ್ಲಿ ಇದು ಉಲ್ಲೇಖವಾಗಿದೆ. ಹೀಗಾಗಿ ಈ ಬಗ್ಗೆ ಗಮನಹರಿಸಬೇಕು. ನಿಯಮ ಮೀರಿದರೆ ಶಿಸ್ತು ಕ್ರಮ ಜರುಗಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.ಧರಣಿ ಮುಂದುವರೆಸಿದ ವಿಪಕ್ಷ ಸದಸ್ಯರ ವಂದನಾ ನಿರ್ಣಯನಾ, ನಿಂದನಾ ನಿರ್ಣಯ ಇತ್ಯರ್ಥಕ್ಕೆ ಒತ್ತಾಯಿಸಿದರು. ಸದನ ಹತೋಟಿಗೆ ಬರದ ಕಾರಣ ಸದನವನ್ನ 10 ನಿಮಿಷಗಳ ಕಾಲ ಮುಂದೂಡಿ ಸಭಾಪತಿಗಳು ಮುಂದೂಡಿದರು.

ಸಭಾನಾಯಕರು,ಪ್ರತಿಪಕ್ಷದ ನಾಯಕರು ಮುಖ್ಯ ಸಚೇತಕರ ಜೊತೆ ತಮ್ಮ ಕಚೇರಿಯಲ್ಲಿ ಸಭೆ ನಡೆಸಿದ ಬಳಿಕ ಅರ್ಧಗಂಟೆಗಳ ಬಳಿಕ ಮತ್ತೆ ಕಲಾಪವನ್ನು ಅರಂಭಿಸಿದರು.

ಕಲಾಪದಲ್ಲಿ ಇದೇ ಮತ್ತೆ ಇದೇ ವಿಚಾರವಾಗಿ ಪ್ರತಿಪಕ್ಷಗಳ ಧರಣಿ ಮುಂದುವರೆಯಿತು ಸಭಾನಾಯಕರು ರಾಜ್ಯಪಾಲರ ಭಾಷಣ ಕುರಿತು ಖಂಡನೆ ವ್ಯಕ್ತಪಡಿಸಿದ ಕುರಿತು ವಿಷಾದ ವ್ಯಕ್ತಪಡಿಸಿ ಸುಗಮವಾಗಿ ಕಲಾಪ ನಡೆಸಬೇಕು ಎಂಬ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹಿಸಿದರು.

ಸಭಾಪತಿಗಳು ಆಡಳಿತ ಪಕ್ಷದಿಂದ ಖಂಡನೆಯನ್ನು ಬಿಟ್ಟು ವಂದನೆ ಮುಂದುವರೆಸಲು ನಿರ್ಧರಿಸಲಾಗಿದೆ,ಈ ಸಂಬಂಧ ಸಭಾನಾಯಕರು ಸ್ಪಷ್ಟನೆ ನೀಡಿದ್ದಾರೆ, ರಾಜ್ಯಪಾಲರಿಗೆ ಯಾರೂ ಅಗೌರವ ತೋರಬಾರದು ಕಲಾಪವನ್ನು ಮುಂದುವರೆಸಲು ಅವಕಾಶ ಮಾಡಿಕೊಡಿ ಎಂದು ವಿನಂತಿಸಿದರು.

ಆದರೆ ಖಂಡನೆ ವ್ಯಕ್ತಪಡಿಸಿರುವುದು ಕಡತದಲ್ಲಿರುವಾಗ ಅದಕ್ಕೆ ವಿಷಾದ ವ್ಯಕ್ತಪಡಿಸಿ ಖಂಡನೆಯನ್ನು ಕಡತದಿಂದ ತೆಗೆದುಹಾಕಿ ಪ್ರತಿಪಕ್ಷದ ಸದಸ್ಯರು ಒತ್ತಾಯಿಸಿದರು

ಇದರಿಂದ ಆಡಳಿತ ಪ್ರತಿಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿ ಧರಣಿ ಮುಂದುವರೆದಾಗ ಸಭಾಪತಿಗಳು ಸದನದ ಕಲಾಪವನ್ನು ಭೋಜನ ವಿರಾಮಕ್ಕೆ ಮುಂದೂಡಿದರು.

# ನಾಲ್ಕು ಕೋಟಿ ಡ್ರಗ್ ವಶ: 10 ಮಂದಿ ಸೆರೆ



**ಬೆಂಗಳೂರು,ಜ.28**-ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿದ್ದ ಇಬ್ಬರು ಇಂಜಿನಿಯರ್ ಗಳು,ಕಾನೂನು ವಿದ್ಯಾರ್ಥಿ,ಬೌನ್ಸರ್ ಸೇರಿ ಹತ್ತು ಮಂದಿ ಡ್ರಗ್ ಫೆಡ್ಲರ್ ಗಳನ್ನು ಬಂಧಿಸಿ ಭರ್ಜರಿ ಬೇಟೆಯಾಡಿರುವ ಅಮೃತಹಳ್ಳಿ ಪೊಲೀಸರು 4 ಕೋಟಿ ಮೌಲ್ಯದ ಮಾಲುಗಳನ್ನು ಜಪ್ತಿ ಮಾಡಿದ್ದಾರೆ.

ಬಂಧಿತ ಆರೋಪಿಗಳಿಂದ 36 ಸಾವಿರ ನಗದು,3 ಕೆ.ಜಿ ಹೈಡ್ರೋ ಗಾಂಜಾ, 50 ಗ್ರಾಂ ಎಂಡಿಎಂಎ, 500 ಗ್ರಾಂ ಚರಸ್, 500 ಎಲ್ಎಸ್ ಡಿ ಸ್ಟ್ರಿಪ್ಸ್ ಗಳು, 10 ಕೆಜಿ ಗಾಂಜಾ, 2 ಕಾರುಗಳು, 14 ಮೊಬೈಲ್ ಗಳು ಸೇರಿ 4 ಕೋಟಿ ಮೌಲ್ಯದ ಮಾಲುಗಳನ್ನು ವಶಪಡಿಸಿಕೊಂಡು ಹೆಚ್ಚಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಕೋಗಿಲು ಲೇಔಟ್‌ನ ಏರೋನಾಟಿಕಲ್ ಇಂಜಿನಿಯರಿಂಗ್ ವಿದ್ಯಾರ್ಥಿ ಕುಶಾಲ್‌ಗೌಡ(23)ರಾಜಾನುಕುಂಟೆಯ ಕಾನೂನು ವಿದ್ಯಾರ್ಥಿ ಶಶಾಂಕ್( 28) ಮರಳವಾಡಿಯ ಬೌನ್ಸರ್ ಸಾಗರ್(29)

ದೊಡ್ಡಕಮ್ಮನಹಳ್ಳಿಯ ಕ್ಯಾಬ್ ಚಾಲಕ ವಿಲ್ಸನ್.ಎಸ್ (48)ಅಕ್ಷಯನಗರದ ಆಶಿರ್ ಅಲಿ(36) ರಿಯಾಸ್(38) ಬೇಗೂರಿನ ಸಜಾದ್(34) ಎಲೆಕ್ಟ್ರಾನಿಕ್ ಸಿಟಿಯ

ಶಿಹಾಬ್.ಕೆ.ಪಿ(30)ದೊಡ್ಡಗಮ್ಮನಹಳ್ಳಿಯ ಅಬ್ದುಲ್ ನಾಸಿರ್(28) ದೇವರಾಜ ಅರಸು ನಗರದ ಸಾಫ್ಟ್‌ವೇರ್ ಇಂಜಿನಿಯರ್

ಅಭಿನವ್.ಡಿ(21) ಬಂಧಿತ ಆರೋಪಿಗಳಾಗಿದ್ದಾರೆ.

ಬಂಧಿತರಲ್ಲಿ ಓರ್ವ ದೆಹಲಿ 7 ಮಂದಿ ಕೇರಳದವರು ಸೇರಿದ್ದಾರೆ ಇನ್ನಿಬ್ಬರು ಬೆಂಗಳೂರಿನವರಾಗಿದ್ದು,ಗ್ಯಾಂಗ್ ಕಟ್ಟಿಕೊಂಡು ಕೃತ್ಯದಲ್ಲಿ ತೊಡಗಿದ್ದರು ಎಂದು ಕಮೀಷನರ್ ಹೇಳಿದರು.

ಮಾರುತ್ ಹಳ್ಳಿಯ ಜಕ್ಕೂರು ರೈಲ್ವೆ ಟ್ರ್ಯಾಕ್ ಬಳಿ ನಾಲ್ವರು ವ್ಯಕ್ತಿಗಳು ಡ್ರಗ್ಸ್ ಮಾರಾಟಕ್ಕೆ ಯತ್ನಿಸಿದ ಮಾಹಿತಿಯನ್ನಾಧರಿಸಿ ದಾಳಿ ಮಾಡಿ, ಹೊರ ರಾಜ್ಯದ ಇಬ್ಬರು ವ್ಯಕ್ತಿಗಳು ಸೇರಿ ನಾಲ್ವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಹೆಚ್ಚಿನ ಹಣಗಳಿಸುವ ಉದ್ದೇಶದಿಂದ ವಿದೇಶ ಮತ್ತು ಹೊರ ರಾಜ್ಯದಿಂದ ಅಪರಿಚಿತ ವ್ಯಕ್ತಿಗಳಿಂದ ಕಡಿಮೆ ಬೆಲೆಗೆ ಹೈಡ್ರೋ ಗಾಂಜಾ, ಎಂಡಿಎಂಎ. ಚರಸ್, ಎಲ್.ಎಸ್.ಡಿ ಸ್ಟ್ರೀಪ್ ಗಳು ಹಾಗೂ ಗಾಂಜಾವನ್ನು ಖರೀದಿಸಿ ತಂದು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದನ್ನು ಒಪ್ಪಿಕೊಂಡಿದ್ದು,ಅವರನ್ನು ಬಂಧಿಸಲಾಗಿದೆ.

ಆರೋಪಿಗಳನ್ನು ಸುದೀರ್ಘ ವಿಚಾರಣೆ ನಡೆಸಿ ಅವರು ಮಾಹಿತಿ ಮೇರೆಗೆ ಕನಕಪುರ ರಸ್ತೆಯ ಕಗ್ಗಲಿಪುರದಲ್ಲಿ ಐವರು ವಶಕ್ಕೆ ಪಡೆದು ವಿಚಾರಣೆ ನಡೆಸಿ ಅವರಿಂದ ಜಿಕೆವಿಕೆ ಮೈದಾನದಲ್ಲಿ 2 ಕೆ.ಜಿ ಹೈಡ್ರೋ ಗಾಂಜಾ, 1 ಕಾರು, 8 ಮೊಬೈಲ್ ಗಳು 36 ಸಾವಿರ ನಗದನ್ನು ವಶಪಡಿಸಿಕೊಳ್ಳಲಾಗಿದೆ.

ಅವರ ಮಾಹಿತಿಯ ಮೇರೆಗೆ ಹೊರ ರಾಜ್ಯದ ಓರ್ವನನ್ನು ಮೈಸೂರು ರಸ್ತೆಯ ಸ್ಯಾಟಲೈಟ್ ಬಸ್ ನಿಲ್ದಾಣದ ಬಳಿ 500 ಎಲ್.ಎಸ್.ಡಿ ಸ್ಟ್ರಿಪ್ಸ್, 2 ಕೆ.ಜಿ ಗಾಂಜಾ ಸಮೇತ ವಶಕ್ಕೆ ಪಡೆದುಕೊಂಡು ಬಂಧಿಸಲಾಗಿದೆ.

ಈಶಾನ್ಯ ವಿಭಾಗದ ಡಿಸಿಪಿ ಜಿ.ಕೆ ಮಿಥುನ್ ಕುಮಾರ್ ಮಾರ್ಗದರ್ಶನದಲ್ಲಿ, ಅಮೃತಹಳ್ಳಿ ಪೊಲೀಸ್ ಇನ್ಸ್‌ಪೆಕ್ಟರ್ ಅಂಬರೀಶ್.ಎಂ ಮತ್ತವರ ಸಿಬ್ಬಂದಿ ಪ್ರಕರಣವನ್ನು ಬೇಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ತಿಳಿಸಿದರು.

# ಅಭಿವೃದ್ಧಿ, ಸಾಮಾಜಿಕ ನ್ಯಾಯ ಕೇಂದ್ರದ ನಿಲುವು



**ನವದೆಹಲಿ, ಜ.28**-ಇಂದಿನಿಂದ ಸಂಸತ್ತಿನ ಬಜೆಟ್ ಅಧಿವೇಶನ ಆರಂಭವಾಗಿದ್ದು, ಉಭಯ ಸದನಗಳನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾಷಣ ಮಾಡಿದರು. ಎಲ್ಲರನ್ನೊಳಗೊಂಡ ಅಭಿವೃದ್ಧಿ, ಸಾಮಾಜಿಕ ನ್ಯಾಯ ಕೇಂದ್ರ ಸರ್ಕಾರದ ದೂರದೃಷ್ಟಿಯ ನಿಲುವು ಎಂದು ಅವರು ತಿಳಿಸಿದರು.

ಕಳೆದ ವರ್ಷ ದೇಶದ ವೇಗದ ಪ್ರಗತಿ ಮತ್ತು ಶ್ರೀಮಂತ ಪರಂಪರೆಯನ್ನು ಆಚರಿಸಲಾಯಿತು ಎಂದು ತಮ್ಮ ಭಾಷಣ ಆರಂಭಿಸಿದ ಅವರು, ವಂದೇ ಮಾತರಂ ಗೀತೆಯ 150ನೇ ವರ್ಷವನ್ನು ದೇಶಾದ್ಯಂತ ಆಚರಿಸುವ ಮೂಲಕ ಬಂಕಿಮ್ ಚಂದ್ರ ಚಟರ್ಜಿ ಅವರಿಗೆ ವಿಶೇಷ ಗೌರವ ಸಲ್ಲಿಸಲಾಯಿತು. ಬಿರ್ಸಾ ಮುಂಡಾ ಅವರ 150ನೇ ಜನ್ಮ ದಿನಾಚರಣೆ, ಸರ್ದಾರ್ ಪಟೇಲರ 150ನೇ ಜನ್ಮ ದಿನಾಚರಣೆ, ತೇಜ್ ಬಹದ್ದೂರ್ ಜೀ ಅವರ 350ನೇ ಶಹೀದ್ ದಿವಸ್ ಆಚರಣೆಯ ಮೂಲಕ ತಮ್ಮ ಪೂರ್ವಜರ ಕೊಡುಗೆಗಳನ್ನು ಸ್ಮರಿಸಿದೆ. ಈ ಆಚರಣೆಗಳು ಹೊಸ ಪೀಳಿಗೆಗೆ ಸ್ಫೂರ್ತಿ ತುಂಬಿವೆ. ಇದು ವಿಕಸಿತ ಭಾರತದತ್ತ ನಮ್ಮ ಪ್ರಯಾಣವನ್ನು ಮತ್ತಷ್ಟು ವೇಗಗೊಳಿಸುತ್ತದೆ ಎಂದು ಹೇಳಿದರು.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಪ್ರತಿಪಾದಿಸಿದ ಸಮಾನತೆ ಮತ್ತು ಸಾಮಾಜಿಕ ನ್ಯಾಯವನ್ನು ಒತ್ತಿ ಹೇಳಿದ ಅವರು, ದೇಶದ ಪ್ರತಿಯೊಬ್ಬ ನಾಗರಿಕನೂ ಯಾವುದೇ ತಾರತಮ್ಯವಿಲ್ಲದೆ ತಮ್ಮ ಸಂಪೂರ್ಣ ಹಕ್ಕುಗಳನ್ನು ಪಡೆಯಬೇಕು. ನನ್ನ ಸರ್ಕಾರ ನಿಜವಾದ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆ. ಇದರ ಪರಿಣಾಮವಾಗಿ ಕಳೆದ ದಶಕದಲ್ಲಿ ಸುಮಾರು 25 ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ. ಬಡವರನ್ನು ಸಬಲೀಕರಣಗೊಳಿಸುವ ಪ್ರಯತ್ನ ಸರ್ಕಾರದ ಮೂರನೇ ಅವಧಿಯಲ್ಲಿ ಮತ್ತಷ್ಟು ಚುರುಕು ಪಡೆದಿದೆ ಎಂದರು.

ನಮ್ಮ ಸರ್ಕಾರ ದಲಿತರು, ಹಿಂದುಳಿದ ವರ್ಗ ಮತ್ತು ಬುಡಕಟ್ಟು ಸಮುದಾಯ ಸೇರಿದಂತೆ ಎಲ್ಲರಿಗಾಗಿಯೂ ಕೆಲಸ ಮಾಡುತ್ತಿದೆ. ಎಲ್ಲರೊಂದಿಗೆ ಎಲ್ಲರ ವಿಕಾಸ ಎಂಬ ದೂರದೃಷ್ಟಿ ಪ್ರತಿ ನಾಗರಿಕನ ಜೀವನದ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತಿದೆ. 2014ರ ಆರಂಭದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳು 25 ಕೋಟಿ ನಾಗರಿಕರನ್ನು ತಲುಪಿವೆ. ಇದರ ಜತೆಗೆ ಸರ್ಕಾರದ ಪ್ರಯತ್ನದೊಂದಿಗೆ ಈ ಯೋಜನೆ ಇದೀಗ 95 ಕೋಟಿ ಭಾರತೀಯರಿಗೆ ಲಭ್ಯವಿದೆ ಎಂದು ತಿಳಿಸಿದರು.

ಇದೇ ವೇಳೆ ಮನೇರಗಾ ಬದಲಾಗಿ ನೂತನವಾಗಿ ತಂದಿರುವ ವಿಬಿ-ಜಿರಾಮ್ ಜಿ ಕಾಯ್ದೆಯ ಕುರಿತು ಮಾತನಾಡುತ್ತಿದ್ದಂತೆ ಆಡಳಿತ ಪಕ್ಷದ ಸಂಸದರು ಮೇಜು ಕುಟ್ಟಿ ಸಂಭ್ರಮಿಸಿದರು. ವಿರೋಧ ಪಕ್ಷದ ಸಂಸದರು ಎದ್ದು ನಿಂತು ಪ್ರತಿಭಟಿಸಿ ಕಾಯ್ದೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋಗ ಮತ್ತು ಅಭಿವೃದ್ಧಿ ಮತ್ತು ವಿಕಸಿತ ಭಾರತಕಕ್ಕಾಗಿ ಜಿ ರಾಮ್ ಜಿ ಕಾನೂನು ರಚಿಸಲಾಗಿದೆ. ಇದು ಹಳ್ಳಿಗಳಲ್ಲಿ 125 ದಿನಗಳ ಉದ್ಯೋಗ ಖಾತರಿಯನ್ನು ಜನರಿಗೆ ನೀಡುತ್ತದೆ ಎಂದರು.

2026ರ ಮೂಲಕ ನಾವು 21ನೇ ಶತಮಾನದ ಎರಡನೇ ಹಂತ ಪ್ರವೇಶಿಸಿದ್ದು, ಕಳೆದ 25 ವರ್ಷಗಳ ಸಾಧನೆಗಳು ವಿವಿಧ ಕ್ಷೇತ್ರಗಳಲ್ಲಿ ಬಲವಾದ ಅಡಿಪಾಯ ಹಾಕಿವೆ. ಇದು ವಿಕಸಿತ ಭಾರತದತ್ತ ಪ್ರಯಾಣದ ನಿರ್ಣಾಯಕ ಅಡಿಪಾಯವಾಗಿದೆ ಎಂದರು. ಈ ಬಾರಿ ಬಜೆಟ್ ಅಧಿವೇಶನ 65 ದಿನ ನಡೆಯಲಿದ್ದು, ಏಪ್ರಿಲ್ 2ರಂದು ಕೊನೆಗೊಳ್ಳಲಿದೆ.

# ತುಳು 2ನೇ ಹೆಚ್ಚುವರಿ ಅಧಿಕೃತ ಭಾಷೆಯಾಗಿ ಶೀಘ್ರ ಘೋಷಣೆ



**ಬೆಂಗಳೂರು, ಜ. 28**- ರಾಜ್ಯದಲ್ಲಿ ತುಳು ಭಾಷೆಯನ್ನು ರಾಜ್ಯದ 2ನೇ ಹೆಚ್ಚುವರಿ ಅಧಿಕೃತ ಭಾಷೆಯನ್ನಾಗಿ ಆದಷ್ಟು ಶೀಘ್ರ ಘೋಷಣೆ ಮಾಡಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಹೇಳಿದರು.

ವಿಧಾನಸಭೆಯಲ್ಲಿಂದು ಕಾಂಗ್ರೆಸ್‌ನ ಅಶೋಕ್ ರೈ ರವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ತುಳು ಭಾಷೆಯನ್ನು ರಾಜ್ಯದ 2ನೇ ಹೆಚ್ಚುವರಿ ಅಧಿಕೃತ ಭಾಷೆಯನ್ನಾಗಿ ಘೋಷಣೆ ಮಾಡುವ ನಿಟ್ಟಿನಲ್ಲಿ ತುಳು ಭಾಳೆಯ ಸ್ವರೂಪ ಮತ್ತು ಇತಿಹಾಸ, ತುಳು ಸಾಹಿತ್ಯ ಪರಂಪರೆ, ತುಳು ಲಿಪಿ, ಪ್ರಾಚೀನ ತುಳು ಸಾಹಿತ್ಯ, ಆಧುನಿಕ ತುಳು ಸಾಹಿತ್ಯ, ಸಂಸ್ಕೃತಿ, ತುಳು ಶಾಸನಗಳ ಕುರಿತು ಅಧ್ಯಯನ ನಡೆಸಲು ಡಾ. ಮೋಹನ್ ಆಳ್ವಾರವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿತ್ತು. ಈ ಸಮಿತಿ 2023ರ ಫೆಬ್ರವರಿಯಲ್ಲಿ ಸರ್ಕಾರಕ್ಕೆ ವರದಿ ಸಲ್ಲಿಸಿದೆ ಎಂದರು.

ಈ ಸಮಿತಿಯು ಸಲ್ಲಿಸಿರುವ ವರದಿಯಲ್ಲಿ ನಮ್ಮ ಕರ್ನಾಟಕ ರಾಜ್ಯದಲ್ಲಿ ಕನ್ನಡವೇ ಅಧಿಕೃತ ಆಡಳಿತ ಭಾಷೆಯಾಗಿರುತ್ತದೆ. ಅದೇ ರೀತಿ ಇಂಗ್ಲೀಷ್ ಹೆಚ್ಚುವರಿ ಆಡಳಿತ ಭಾಷೆಯಾಗಿರುತ್ತದೆ. ಯಾವುದೇ ರಾಜ್ಯ ಸರ್ಕಾರ ಒಂದು ಭಾಷೆಯನ್ನು ಆ ರಾಜ್ಯದ ಅಧಿಕೃತ ಭಾಷೆಯನ್ನಾಗಿ ಘೋಷಿಸಲು ಭಾರತ ಸಂವಿಧಾನ ಅನುಚ್ಛೇಧ 345 ರಲ್ಲಿ ಅವಕಾಶ ಮಾಡಿಕೊಟ್ಟಿದೆ. ಈ ಪ್ರಕಾರ ಕ್ರಮ ವಹಿಸುವ ಪೂರ್ವದಲ್ಲಿ ಸದರಿ ರಾಜ್ಯಗಳು ಈ ಬಗ್ಗೆ ಕಾನೂನಾತ್ಮಕ ಸಮಿತಿಗಳನ್ನು ರಚನೆ ಮಾಡಿ ಮತ್ತು ವರದಿಯನ್ನು ಪಡೆದುಕೊಂಡು ಆ ನಂತರ ಮುಂದುವರೆಯಬಹುದಾಗಿರುತ್ತದೆ. ಅದೇ ರೀತಿ ತುಳು ಭಾಷೆಯನ್ನು ರಾಜ್ಯದ ಅಧಿಕೃತ ಭಾಷೆಯೆಂದು ಘೋಷಿಸುವ ಬಗ್ಗೆ ಆಡಳಿತ ಇಲಾಖೆಯು ಭಾರತ ಸಂವಿಧಾನದ ಅನುಚ್ಛೇಧ 345 ಪ್ರಕಾರ ಕ್ರಮ ವಹಿಸಬಹುದಾಗಿರುತ್ತದೆ ಮತ್ತು ಈ ರೀತಿ ಕ್ರಮ ವಹಿಸುವ ಪೂರ್ವದಲ್ಲಿ ಸದರಿ ಭಾಷೆಗೆ ಸಂಬಂಧಿಸಿದಂತೆ ಸೂಕ್ತವಾದ ಅಧ್ಯಯನ ಮಾಡಲು ಸಮಿತಿಯನ್ನು ರಚಿಸಲು ಸದರಿ ಸಮಿತಿಯ ವರದಿಯ ಆಧಾರದ ಮೇರೆಗೆ ಹಾಗೂ ವಿವಿಧ ರಾಜ್ಯಗಳಲ್ಲಿ 2ನೇ ಭಾಷೆಯನ್ನು ಘೋಷಿಸಿರುವ ಬಗ್ಗೆ ಅಧ್ಯಯನ ನಡೆಸಿ, ಆ ನಂತರ ಸೂಕ್ತವಾಗಿ ಮುಂದುವರೆಯಬೇಕಾಗುತ್ತದೆ ಎಂದು ಹೇಳಿದೆ.

ಆಂಧ್ರ ಪ್ರದೇಶದಲ್ಲಿ ಉರ್ದು ಭಾಷೆಯನ್ನು 2ನೇ ಅಧಿಕೃತ ಭಾಷೆಯನ್ನಾಗಿ ಘೋಷಿಸಲಾಗಿರುತ್ತದೆ. ಅಲ್ಲಿ ಅನುಸರಿಸುವ ಮಾನದಂಡಗಳ ಕುರಿತು ಪರಿಶೀಲಿಸಲು ಸಮಿತಿಯು ಕಳೆದ ಜ. 19 ಮತ್ತು 20 ರಂದು ಆಂಧ್ರಕ್ಕೆ ಭೇಟಿ ನೀಡಿದ್ದು, ಅಧ್ಯಯನ ವರದಿಯನ್ನು ಸಲ್ಲಿಸಿಲ್ಲ. ಈ ವರದಿ ಬಂದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಮಂಗಳೂರು ಮತ್ತು ಉಡುಪಿ ಜಿಲ್ಲೆಯ ಎಲ್ಲಾ ಶಾಸಕರ ಸಭೆ ಕರೆದು ಒಂದು ತೀರ್ಮಾನ ಮಾಡುವುದಾಗಿ ಸಚಿವ ತಂಗಡಗಿ ಹೇಳಿದರು.

ಈ ಸಂದರ್ಭದಲ್ಲಿ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ ಯವರು ಲಂಬಾಣಿ ಭಾಷೆಯನ್ನು ಷೆಡ್ಯೂಲ್ ಎ ಗೆ ಸೇರಿಸುವ ಸಂಬಂಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಆಗ ಸಭಾಧ್ಯಕ್ಷರು ಮೊದಲು ತುಳು ಭಾಷೆಯನ್ನು ಮಾಡೋಣ. ನಂತರ ನಿಮ್ಮ ಲಂಬಾಣಿ ಭಾಷೆ ಸಂಬಂಧವೂ ಸರ್ಕಾರ ಕ್ರಮ ಕೈಗೊಳ್ಳುತ್ತದೆ ಎಂದು ಹೇಳಿ, ಲಂಬಾಣಿ ಭಾಷೆಯನ್ನು ರಾಜ್ಯದ 2ನೇ ಹೆಚ್ಚುವರಿ ಭಾಷೆಯನ್ನಾಗಿ ಮಾಡಲು ಕ್ರಮ ಕೈಗೊಳ್ಳುವಂತೆ ಸಚಿವರಿಗೆ ಸೂಚಿಸಿದರು.

# ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಕಲಿಕಾ ಹಬ್ಬ ಸಹಕಾರಿ



**ಬಾದಾಮಿ,ಜ.28**- ಕಲಿಕಾ ಹಬ್ಬ ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸಲು ಸಹಕಾರಿಯಾಗುತ್ತದೆ. ಎಲ್ಲಾ ಮಕ್ಕಳು ಗುಣಾತ್ಮಕ ಶಿಕ್ಷಣ ಪಡೆಯಬೇಕು ಎಂಬುದು ಸರಕಾರದ ಆಶಯವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೇಶವ ವಾಮನ ಪೆಟ್ಲೂರ ಹೇಳಿದರು.

ಅವರು ತಾಲೂಕಿನ ನಾಗರಾಳ ಎಸ್.ಬಿ. ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ 2025-26 ನೇ ಸಾಲಿನ ಪ್ರಾಥಮಿಕ ಶಾಲೆಗಳ ಚೊಳಚಗುಡ್ಡ ಕ್ಲಷ್ಟರ್ ಮಟ್ಟದ ಎಫ್.ಎಲ್.ಎನ್.ಕಲಿಕಾ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕಲಿಕಾ ಹಬ್ಬದಿಂದ ಶಾಲಾ ಮಕ್ಕಳಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುತ್ತದೆ ಎಂದು ಹೇಳಿದರು. ವೇದಿಕೆಯ ಮೇಲೆ ಕ್ಷೇತ್ರ ಸಮನ್ವಯಾಧಿಕಾರಿ ಎಂ.ಬಿ.ದೊಡ್ಡಪ್ಪನ್ನವರ, ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕ ಬಿ.ಎಚ್.ಹಳಗೇರಿ, ಶಿಕ್ಷಣ ಸಂಯೋಜಕ ಬಿ.ಟಿ.ಹಳ್ಳಿ, ಚೊಳಚಗುಡ್ಡ ಸಮೂಹ ಸಂಪನ್ಮೂಲ ವ್ಯಕ್ತಿ ಸುರೇಶ ಬೊಂಬ್ಲೆ, ಸರಕಾರಿ ನೌಕರರ ಸಂಘದ ತಾಲೂಕಾ ಕಾರ್ಯದರ್ಶಿ ಆರ್.ಟಿ.ಪಟ್ಟಣಶೆಟ್ಟಿ, ಮುಖ್ಯಶಿಕ್ಷಕರಾದ ಆರ್.ಎಂ.ಸಾರವಾಡ, ಕೆ.ಎಚ್.ಹಲಕುರ್ಕಿ, ಪ್ರಶಾಂತ ಪಡಿಯಪ್ಪನ್ನವರ, ಸೇರಿದಂತೆ ಚೊಳಚಗುಡ್ಡ ಸಮೂಹದ ಎಲ್ಲ ಶಾಲೆಗಳ ಮುಖ್ಯ ಗುರುಗಳು ಹಾಗೂ ಸಹಶಿಕ್ಷಕರು, ಎಸ್.ಡಿ.ಎಂ.ಸಿ. ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಸ್ಥಳೀಯ ಶಾಲೆಯ ಎಲ್ಲಾ ಸಿಬ್ಬಂದಿ ವರ್ಗ ಹಾಗೂ ಮಕ್ಕಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.


ಯುವ ಮಾರ್ಗ
www.yuvamarga.com Yuva Marga yuva_marga_

# ಕೋಮನೂರು ಗ್ರಾಮದ ತಾಯಿ, ಮಗಳು ಕಾಣೆ: ಪತ್ತೆಗೆ ಮುದಗಲ್ ಪೊಲೀಸರ ಮನವಿ

ಯುವಮಾರ್ಗ ಸುದ್ದಿ

**ರಾಯಚೂರು,ಜ.28–** ಲಿಂಗಸುಗೂರು ತಾಲೂಕಿನ ಮುದಗಲ್ ಪೊಲೀಸ್ ಠಾಣೆ ವ್ಯಾಪ್ತಿಯ ಕೋಮನೂರು ಗ್ರಾಮದ ಹೊಳಿಯಮ್ಮ ಗಂಡ ಯಮನೂರಪ್ಪ ಪೂಜಾರಿ (35) ಹಾಗೂ 2 ವರ್ಷ ವಯೋಮಾನದ ಗಂಗಮ್ಮ ತಂದೆ ಯಮನೂರಪ್ಪ ಪೂಜಾರಿ ಎನ್ನುವ ತಾಯಿ ಹಾಗೂ ಮಗಳು ಕಾಣೆಯಾಗಿದ್ದು, ಈ ಕುರಿತು ಮುದಗಲ್ ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ: 150/2025 ಕಲಂ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ದಿನಾಂಕ 05–10–2025ರಂದು ಬೆಳಿಗ್ಗೆ 6 ಗಂಟೆಗೆ ಮುದಗಲ್ ಸಂತೆಗೆ ಹೋಗಿದ್ದೆ. ಕುರಿ ಸಂತೆ ಮುಗಿಸಿ ಮರಳಿ ಮಧ್ಯಾಹ್ನ 12 ಗಂಟೆಗೆ ಮನೆಗೆ ಬಂದಾಗ ಮನೆಯಲ್ಲಿ ಹೆಂಡತಿ ಮತ್ತು ಮಗಳು ಇರಲಿಲ್ಲ. ಮನೆಯಲ್ಲಿದ್ದ ಮಗನಿಗೆ ಕೇಳಿದಾಗ ಕೋಡಿಹಾಳದ ಆಸ್ಪತ್ರೆಗೆ ಹೋಗುವುದಾಗಿ ಅವ್ವ ಹೇಳಿ ಹೋದಳು ಎಂದು ತಿಳಿಸಿದ್ದಾನೆ. ರೋಡಲಬಂಡ, ಕಮಲದಿನ್ನಿ, ತೊಂಡಿಹಾಳ ಎಲ್ಲ ಕಡೆಗೆ ಹುಡುಕಾಡಿದರು





ಹೆಂಡತಿ ಮತ್ತು ಮಗಳು ಪತ್ತೆಯಾಗಿರುವುದಿಲ್ಲ ಎಂದು ಹೊಳಿಯಮ್ಮ ಅವರ ಗಂಡ ಯಮನೂರಪ್ಪ ತಂದೆ ಲಕ್ಕಪ್ಪ ಪೂಜಾರಿ ಅವರು 12–10–2025ರಂದು ದೂರು ದಾಖಲಿಸಿದ್ದಾರೆ.

ಕಾಣೆಯಾದ ಈ ಮಹಿಳೆ ಮತ್ತು ಎರಡು ವರ್ಷದ ಮಗುವಿನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಮುದಗಲ್ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08537–280536, ಪಿಎಸ್ಐ ಮೊಬೈಲ್ ಸಂಖ್ಯೆ: 9480803857, ಮಸ್ಕಿ ವೃತ್ತ ಸಿಪಿಐ ಮೊಬೈಲ್ ಸಂಖ್ಯೆ: 9480803834, ಲಿಂಗಸುಗೂರು ಡಿಎಸ್‌ಪಿ ಮೊಬೈಲ್ ಸಂಖ್ಯೆ: 9480803821ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮುದಗಲ್ ಪೊಲೀಸ್ ಠಾಣೆ ಆರಕ್ಷಕ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನವರಿ 29 ರಂದು ಮಸ್ಕಿಯಲ್ಲಿ ವಿಶೇಷ ಕಾರ್ಯಕ್ರಮ

**ಮಸ್ಕಿ ಜ. 28–** ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ರಾಯಚೂರು ಬಳ್ಳಾರಿ ಕೊಪ್ಪಳ ಹಾಗೂ ವಿಜಯನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟ (ಕೆ.ಎಂ.ಎಫ್) ಸಿಂಧನೂರು, ಸಹಕಾರ ಇಲಾಖೆ ಹಾಗೂ ಮಸ್ಕಿ ತಾಲೂಲಿನ ಹಾಲು ಉತ್ಪಾದಕರ ಸಹಕಾರ ಸಂಘಗಳು ಇವರುಗಳ ಸಂಯುಕ್ತ ಆಶ್ರಯದಲ್ಲಿ "ಮಸ್ಕಿ ತಾಲೂಕಿನಲ್ಲಿ 2024–25ನೇ ಸಾಲಿನಲ್ಲಿ ಹೊಸದಾಗಿ ರಚನೆಯಾದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳಿಗೆ ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ಕಾರ್ಯಕ್ರಮ"ವನ್ನು ದಿನಾಂಕ : 29–01–2026 ರಂದು ತಾಲೂಕು ಪಂಚಾಯತ್ ಕಾರ್ಯಾಲಯ ಮಸ್ಕಿ ಇಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಕಮತಗಿ ಸಹಕಾರ ಇಲಾಖೆ, (ಎ.ಆರ್.ಸಿ.ಎಸ್. ಕಛೇರಿ), ಸಿಂಧನೂರು ಅವರು ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಮತ್ತು ಡಾ॥ ದೇವಣ್ಣ ಪಶು ವೈದ್ಯರು, ಕೆ.ಎಂ.ಎಫ್ ಹಾಲು ಒಕ್ಕೂಟ ನಿ., ಬಳ್ಳಾರಿ.ಅವರು ಪಶು ಆಹಾರ, ಗುಣಮಟ್ಟದ ಮತ್ತು ಅಧಿಕ ಹಾಲಿನ ಉತ್ಪಾದನೆಗೆ ಉತ್ತೇಜನ, ರಾಸುಗಳ ನಿರ್ವಹಣೆ, ಕರುಗಳ ಲಾಲನೆ ಪಾಲನೆ ಹಾಗೂ ಹೈನುಗಾರಿಕೆ ಮಹತ್ವ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಕೆ.ಎಂ.ಎಫ್. ಹಾಲು ಒಕ್ಕೂಟ ಮತ್ತು ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕರುಗಳು ಭಾಗವಹಿಸಲಿದ್ದಾರೆ. ಕಾರಣ ಮಸ್ಕಿ ತಾಲೂಕಿನ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಪ್ರಯೋಜನ ಪಡೆಯುವಂತೆ ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರು, ಮುಖ್ಯಕಾರ್ಯನಿರ್ವಹಣಾಧಿಕಾರಿ ಹಾಗೂ ಕೆ.ಎಂ.ಎಫ್ ಅಧಿಕಾರಿಗಳು ಪ್ರಕಟಣೆಯಲ್ಲಿ ಕೋರಿರುತ್ತಾರೆ.

# ಸ್ಪರ್ಶ ಕುಷ್ಟರೊಗ ಕಾರ್ಯಕ್ರಮದ ಜಾಗೃತಿ ಅಭಿಯಾನ ತಹಸೀಲ್ದಾರ್ ಅರುಣ್ ದೇಸಾಯಿ




ಯುವಮಾರ್ಗ ಸುದ್ದಿ

**ಸಿಂಧನೂರು,ಜ.28–** ಶತ ಶತಮಾನಗಳಿಂದ ಇಂದಿಗೂ ಸಮುದಾಯದಲ್ಲಿರುವ ಕುಷ್ಟರೋಗವನ್ನು ನಿರ್ಮೂಲನೆ ಮಾಡಲು ದೇಹದ ಮೇಲಿನ ಸ್ಪರ್ಶ ಜ್ಞಾನವಿಲ್ಲದ ತಿಳಿ ಬಿಳಿ ತಾಮ್ರ ಬಣ್ಣದ ಮಚ್ಚೆಗಳು ಹಾಗೂ ನರ ಮತ್ತು ಚರ್ಮದ ಕಾಯಿಲೆಯಾಗಿದ್ದು ಇದನ್ನು ಮಾತ್ರೆಗಳ ಮೂಲಕ ಸಂಪೂರ್ಣ ಗುಣಪಡಿಸುವುದು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಉಚಿತ ಚಿಕಿತ್ಸೆ ಲಭ್ಯವಿರುತ್ತದೆ ಹೆಚ್ಚಿನ ಜಾಗೃತಿಯನ್ನು ಸಮುದಾಯಕ್ಕೆ ತಲುಪುವಂತೆ ಹೆಚ್ಚು ಹೆಚ್ಚು ಪ್ರಚೂರು ಪಡಿಸಲು ತಾಲೂಕು ದಂಡಾಧಿಕಾರಿಗಳು ತಿಳಿಸಿದರು. ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಕುಷ್ಟರೋಗ ನಿರ್ಮೂಲನ ಕಾರ್ಯಕ್ರಮದಡಿ ಜನವರಿ 30 ರಿಂದ ಫೆಬ್ರುವರಿ 13 ರವರೆಗೆ ಕಾರ್ಯಕ್ರಮನಡೆಯಲಿದ್ದು ಸ್ಪರ್ಶ ಕುಷ್ಟ ರೋಗ ಜಾಗೃತಿ ಅಭಿಯಾನದ ಕುರಿತು ತಾಲೂಕು ಸಮಿತಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತ ಶಾಪ ದಿಂದ ಬರುತ್ತದೆ ಎಂಬ ತಪ್ಪು ನಂಬಿಕೆ 'ಯನ್ನು ಹೋಗಲಾಡಿಸಿ ಇದು ಮೈಕ್ರೋ ಬ್ಯಾಕ್ಟೀರಿಯಾ ಲೆಪ್ರೆ ಎಂಬ ಸೂಕ್ಷ್ಮಾಣು ಜೀವಿಯಿಂದ ಬರುವ ಹಾಗೂ ಕಾಯಿಲೆ ಹೊಂದಿದ ವ್ಯಕ್ತಿ ಕೆಮ್ಮಿದಾಗ ಸೀನಿದಾಗ ಬ್ಯಾಕ್ಟೀರಿಯಾವು ಉಸಿರಿನ ಮೂಲಕ ಜೊತೆಯಾಗಿರುವವರಿಗೆ ದೀರ್ಘಾವಧಿಯಲ್ಲಿ ಬರುವ ಕಾಯಿಲೆಯಾಗಿದೆ.

ಸ್ಪರ್ಶ ವಿಲ್ಲದ ಮಚ್ಚೆಗಳು ಕಂಡು ಬಂದರೆ ತಕ್ಷಣವೇ ವೈದ್ಯರ ಬಳಿ ಪರೀಕ್ಷೆ ಮಾಡಿಸಿ ಖಚಿತಪಡಿಸಿಕೊಳ್ಳಿ ದೇಹದ ಮೇಲಿನ ಮಚ್ಚೆಗಳ ಆಧಾರದ ಮೇಲೆಆರು ತಿಂಗಳಿನಿಂದ ಒಂದು ವರ್ಷ ಉಚಿತವಾದ ಚಿಕಿತ್ಸೆಯೊಂದಿಗೆ ಸಂಪೂರ್ಣ ವಾಸಿಯಾಗುತ್ತದೆ ಎಂಬುದನ್ನು ಮನವರಿಕೆ ಮಾಡಿ ಎಂದರು ನಂತರ ಬೇರೆ ಬೇರೆ ಇಲಾಖೆಯ ಸಹಯೋಗದಲ್ಲಿ ಗ್ರಾಮಗಳಲ್ಲಿ, ಶಾಲೆಗಳಲ್ಲಿ ಮಕ್ಕಳಿಗೆ, ಗ್ರಾಮ ಪಂಚಾಯತ್ ಸದಸ್ಯರಿಗೆ ಸ್ತ್ರೀಶಕ್ತಿ ಸಂಘ ಯುವಕ ಯುವತಿ ಸಂಘ ವಿವಿಧ ಸಂಸ್ಥೆಗಳ ಸದಸ್ಯರಿಗೆ ಹೆಚ್ಚಿನ ಜಾಗೃತಿ ನೀಡಿ ಎಂದ ತಿಸಿದರು.

ಭೀತ್ತಿಪತ್ರ(ಪೋಸ್ಟರ್ )ಗಳನ್ನು ಬಿಡುಗಡೆಗೊಳಿಸಿ ಅತಿ ಹೆಚ್ಚು ಪ್ರಚಾರ ಮಾಡಿ ಎಂದು ತಿಳಿಸಿದರು. ನಂತರ ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಅಯ್ಯನ್ ಗೌಡ ರವರು ಮಾತನಾಡಿ ಸ್ಪರ್ಶ ಕುಷ್ಟರೋಗ ಜಾಗೃತಿ ಅಭಿಯಾನದಲ್ಲಿ ದೇಹದ ಮೇಲೆ ಸ್ಪರ್ಶಜ್ಞಾನವಿಲ್ಲದ ತಿಳಿ ಬಿಳಿ ತಾಮ್ರ ವರ್ಣದ ಮಚ್ಚೆ ಗಳೆನಾದರೂ ಇದ್ದರೆ, ವೈದ್ಯರನ್ನು ಸಂಪರ್ಕ ಮಾಡಬೇಕು ಎಂದು ಹೇಳಿದರು ನಂತರ ಸ್ಪರ್ಶ ಜ್ಞಾನವಿಲ್ಲದ, ಬೆವರದೇ ಇರುವುದು, ಈ ರೋಗವು ಮುಖ್ಯವಾಗಿ ಚರ್ಮ ಹಾಗೂ ನರಗಳಿಗೆ ಸಂಬಂದಿಸಿರುತ್ತದೆ, ಈ ರೋಗವು ಬಡವರು ಶ್ರೀಮಂತರು ಗಂಡು ಹೆಣ್ಣು ಎಂಬ ಭೇದ ಭಾವವಿಲ್ಲದೆ ಯಾರಿಗಾದರೂ ಬರಬಹುದು ರೋಗವನ್ನು ಪ್ರಾರಂಭದ ಲಕ್ಷಣಗಳಿದ್ದಾಗ ಕಂಡುಹಿಡಿದು ಚಿಕಿತ್ಸೆಗೆ ಒಳಪಡಿಸಿದರೆ ಅಂಗವಿಕಲತೆ ಆಗುವುದಿಲ್ಲ ಗುಣಮುಖ ಹೊಂದಿದ ಅಂಗವಿಕಲ ಕುಷ್ಟರೋಗಗಳನ್ನು ಆರ್‌ಸಿಎಸ್(RCS) ಚಿಕಿತ್ಸೆಯಿಂದ ಸರಿಪಡಿಸಲಾಗುವುದು ಕುಷ್ಟರೋಗವನ್ನು ಬಹು ಔಷಧೀಯ ಚಿಕಿತ್ಸೆಯು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ತೆರೆಯುತ್ತದೆ ಕ್ರಮಬದ್ಧವಾದ ಚಿಕಿತ್ಸೆ ಮತ್ತು ಸ್ವಯಂ ಆರೈಕೆಯಿಂದ ಅಂಗವಿಕಲತೆಯನ್ನು ತಡೆಗಟ್ಟಬಹುದು ಕುಷ್ಟರೋಗ ನಿರ್ಮೂಲನೆಯಲ್ಲಿ ಸಮಾಜ ಪಾತ್ರ ಮುಖ್ಯವಾಗಿರುತ್ತದೆ , ಕುಷ್ಟರೋಗದ ಬಗ್ಗೆ ವೈಜ್ಞಾನಿಕ ಸತ್ಯ ಸಂಗತಿಗಳನ್ನು ತಿಳಿದುಕೊಂಡು ಬೇರೆಯವರಿಗೆ ತಿಳಿಸುವುದು ಕುಷ್ಟರೋಗದ ಲಕ್ಷಣಗಳಿದ್ದರೆ ಗುರುತಿಸಿ ಸಮೀಪದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆಗೆ ಒಳಪಡಿಸುವುದು ಈ ರೋಗವನ್ನು ನಿರ್ಮೂಲನೆ ಮಾಡಲು ಜಾಗತಿಕ ಆರೋಗ್ಯ ಸಂಸ್ಥೆ ಹಾಕಿಕೊಂಡು ಈ ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಂಪೂರ್ಣ ಸಹಕಾರ ನೀಡುವುದು ಕುಷ್ಟರೋಗ ಮುಕ್ತ ದೇಶವನ್ನಾಗಿಸುವ ಮಹಾತ್ಮ ಗಾಂಧೀಜಿಯವರ ಕನಸನ್ನು ನನಸಾಗಿಸುವುದು ಕುಷ್ಟರೋಗ ನಿರ್ಮೂಲನೆಗಾಗಿ ಸೇವೆ ಸಲ್ಲಿಸಿದ ಬಾಬಾ ಆ ಮಟೆ, ಮದರ್ ತೆರೆಸಾ, ಹಾಗೂ ಇತರರಂತೆ ನಾವು ನಮ್ಮ ಅಳಿಲುಸೇವೆ ಸಲ್ಲಿಸುವುದು ಎಂದು ಕುಷ್ಠ ರೋಗಿಗಳಿಗೆ ಸಮುದಾಯದಲ್ಲಿ ಪ್ರೀತಿ ವಾತ್ಸಲ್ಯ ಬೇಕು ಕುಷ್ಟರೋಗಕ್ಕೆ ತುತ್ತಾದ ವ್ಯಕ್ತಿ ಸಮಾಜಕ್ಕೆ ಬೇಕಾದ ವ್ಯಕ್ತಿ ಎಂದು ಒಪ್ಪಿಕೊಂಡು ಗೌರವದಿಂದ ಬಾಳಲು ಸಹಕರಿಸಬೇಕು ಎಂದು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಸದರಿ ಕಾರ್ಯಕ್ರಮದಲ್ಲಿ ತಾಲೂಕ ಮಟ್ಟದ ಎಲ್ಲಾ ಅಧಿಕಾರಿಗಳು ಚಂದ್ರಶೇಖರ್ ಅಧಿಕಾರಿಗಳು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸಿಂಧನೂರ್, ಲಿಂಗನಗೌಡರು ಶಿಶು ಅಭಿವೃದ್ಧಿ ಅಧಿಕಾರಿಗಳು ಸಿಂಧನೂರ್, ನಗರ ಸಭೆ ಪೌರಾಯುಕ್ತರು ಪಾಂಡುರಂಗ ಇಟಗಿ, ಬಸಲಿಂಗಪ್ಪ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಅಮರ ಗುಂಡಪ್ಪ ಂಆ, ಐ ಆ ಅಂಗಡಿ ಸಮಾಜ ಕಲ್ಯಾಣ್ ಅಧಿಕಾರಿಗಳು ಸಿಂಧನೂರು ಉಪಸ್ಥಿತರಿದ್ದರು.

# ವಿಶ್ವಕ್ಕೆ ಮಾದರಿ ಭಾರತ ಸಂವಿಧಾನ ಪತ್ರಕರ್ತ ಚಂದ್ರಶೇಖರ ಯರದಿಹಾಳ




ಯುವಮಾರ್ಗ ಸುದ್ದಿ

**ಸಿಂಧನೂರು,ಜ.28–**ಭಾರತದ ಸಂವಿಧಾನ ವಿಶ್ವಕ್ಕೆ ಮಾದರಿಯಾಗಿದೆ, ಅಂತಹ ಸವಿಧಾನವನ್ನು ರಚಿಸಿದ ಡಾ. ಬಾಬಾ ಸಾಬ್ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುವ ಕೆಲಸ ಪ್ರತಿಯೊಬ್ಬರಿಂದ ಆಗಬೇಕು ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ಕಾರ್ಯಕಾರಿ ಮಂಡಳಿಯ ಸದಸ್ಯ ಚಂದ್ರಶೇಖರ ಯರದಿಹಾಳ ಹೇಳಿದರು

ಅವರು ನಗರದ ಕೋಟೆ ಬಡಾವಣೆಯಲ್ಲಿ ಇರುವ ಸೌದಾಗರ್ ಶಾಲೆಯಲ್ಲಿ 77 ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಸೋಮವಾರ ಮಾತನಾಡಿದರು 26 ನೇ ಜನವರಿ 1950 ರಂದು ಭಾರತವು ಸಂವಿಧಾನವನ್ನು ಅಂಗೀಕರಿಸಿದ, ಗಣರಾಜ್ಯೋತ್ಸವ ದಿನ ಇಂದು ಆಗಿದೆ, ಪ್ರತಿಯೊಬ್ಬರು ಸಂವಿಧಾನವನ್ನು ಗೌರವಿಸೋಣ ಕಾನೂನು ಅಡಿಯಲ್ಲಿ ಪ್ರತಿಯೊಬ್ಬರು ಕಾರ್ಯನಿರ್ವಹಿಸುವ ಕೆಲಸ ಆಗಬೇಕು ಮತ್ತು ದೇಶದ ಸಂಸ್ಕೃತಿಯನ್ನು ಎತ್ತಿಡುವ ಕೆಲಸ ಆಗಬೇಕು ಎಂದರು.

ಸಾಹಿತಿ ವೆಂಕಣ್ಣ ಆಚಾರ್ಯ ಜೋಶಿ ಮಾತನಾಡಿ ದೇಶದ ಮಹಾತ್ಮರನ್ನು ನೆನಪಿಸಿಕೊಳ್ಳುವ ಕೆಲಸ ಇಂದಿನ ಯುವಕರಿಂದ ಆಗಬೇಕು, ಆಗ ಮಾತ್ರ ದೇಶದ ಬಗ್ಗೆ ಮತ್ತಷ್ಟು ಜಾಗೃತರಾಗಲು ಸಾಧ್ಯವಾಗುತ್ತದೆ ಎಂದರು.

ಯೋಗ ಗುರು ಎಂ.ಭಾಸ್ಕರ್ ಮಾತನಾಡಿ ಡಾ. ಬಿ.ಆರ್ ಅಂಬೇಡ್ಕರ್ ಅವರ ಆದರ್ಶ, ತತ್ವ,ಸಿದ್ಧಾಂತಗಳನ್ನು ಪಾಲನೆ ಮಾಡಬೇಕು ಆಗ ಮಾತ್ರ ಜೀವನ ಸುಂದರವಾಗಲು ಸಾಧ್ಯವಾಗುತ್ತದೆ, ಯುವಕರು ಆರೋಗ್ಯದ ಕಡೆ ಹೆಚ್ಚು ಹೆಚ್ಚು ಗಮನವಿಸುವ ಕೆಲಸ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಸೌದಾಗರ್ ಸಂಸ್ಥೆಯ ಅಧ್ಯಕ್ಷ ಅಸಾದ್ ಖಾನ್, ಬಾಬರ್ ಸಾಬ್, ಶಿಕ್ಷಕ ರಾಜಣ್ಣ ಸೇರಿದಂತೆ ಇತರರು ಇದ್ದರು.

# ಪ್ಯಾರಾ ಮೆಡಿಕಲ್ ವಿದ್ಯಾರ್ಥಿನಿ ಝುಕಿಯಾ ಮುಲ್ಲಾ ಅವರಿಗೆ ಮೇಣದ ಬತ್ತಿ ಬೆಳಗಿಸಿ ಶ್ರದ್ಧಾಂಜಲಿ



ಯುವಮಾರ್ಗ ಸುದ್ದಿ

**ಲಿಂಗಸೂರು,ಜ.28–** ದಿನಾಂಕ: 20/01/2026 ರಂದು ಹತ್ಯೆಯಾದ ಧಾರವಾಡ ನಗರ ನಿವಾಸಿಯಾಗಿರುವ ಪ್ಯಾರಾ ಮೆಡಿಕಲ್ ವಿದ್ಯಾರ್ಥಿನಿ ಝುಕಿಯಾ ಮುಲ್ಲಾರ ಕೊಲೆ ಇಡೀ ಸಮಾಜದ ಮಾನವ ಕುಲ ತಲೆ ತಗ್ಗಿಸುವ ಹಾಗೂ ಖಂಡಿಸುವ ಈ ಘಟನೆಗೆ ಸಂಬಂಧಪಟ್ಟಂತೆ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿಯು ತೀವ್ರ ಸಂತಾಪ ಹಾಗೂ ವಿಷಾದ ವ್ಯಕ್ತಪಡಿಸುತ್ತದೆ, ಸದರಿ ಘಟನೆಯಲ್ಲಿ ಹತ್ಯೆಯಾದ ಝುಕೀಯ ಮುಲ್ಲಾರಿಗೆ ಇಂದು ಸಾಯಂಕಾಲ 6.30 ಗಂಟೆಗೆ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿವತಿಯಿಂದ ಗಡಿಯಾರ ಚೌಕಿನಲ್ಲಿ ಮೇಣದ ಬತ್ತಿ ಬೆಳಗಿಸಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಅಂಜುಮನ್ ಲಿಂಗಸೂಗೂರ ತಾಲೂಕು ಕಮಿಟಿಯ ಗೌರವ ಅಧ್ಯಕ್ಷರಾದ ಅನ್ವರ್ ಭಾಯಿ, ಅಧ್ಯಕ್ಷರಾದ ಹುಸೇನ್ ಭಾಷಾ ಕೆ., ಉಪಾಧ್ಯಕ್ಷರಾದ ಮುಸ್ತಫಾ, ಪ್ರಧಾನ ಕಾರ್ಯದರ್ಶಿಯಾದ ಅಮೀನ್ ಭಾಯಿ, ಹಸನ್ ಭಾಯಿ, ಆರಿಫ್, ವಸಿಂ, ಸಲೀಂ, ಅಬ್ದುಲ್ಲ ರಜಾಕ್, ಲಾಲಾ ಸಾಬ್, ಹಜರತ್, ಖಯ್ಯುಮ್, ಯುನುಸ್, ಬಾಬರ್, ಮಹೇಬೂಬ್, ಅಬ್ದುಲ್ಲ ವಹೀದ್ ಇಬ್ರಾಹಿಂ, ಅಬ್ಬಾಸ್, ಇರ್ಫಾನ್, ಹುಸೇನ್, ಅಯ್ಯುಬ್, ವಸಿಂ ಪಾಷಾ, ದಾದಾಪೀರ್ ಹಾಗೂ ಅಂಜುಮನ್ ಲಿಂಗಸೂಗೂರ ತಾಲೂಕು ಕಮಿಟಿಯ ಕಾರ್ಯ ಕಾರಿ ಸಮಿತಿಯ ಸದಸ್ಯರು & ಅಂಜುಮನ್ ಕಮಿಟಿಯ ಅಪಾರ ಪ್ರಮಾಣದ ಬೆಂಬಲಿಗರು ಉಪಸ್ಥಿತರಿದ್ದರು

# ಕಲ್ಯಾಣ ಕರ್ನಾಟಕ ಭಾಗದಲ್ಲಿ ಶೈಕ್ಷಣಿಕ ಅಭಿವೃದ್ಧಿಗಾಗಿ ಎಸ್.ಐ.ಓ. ಮತ್ತು ಸಿ.ಇ.ಆರ್.ಎ ವತಿಯಿಂದ ಅಭಿಯಾನ: ಅಬುಬಕರ ಸಿದ್ದೀಕ್

ಯುವಮಾರ್ಗ ಸುದ್ದಿ

**ಮಾನ್ವಿ,ಜ.28–** ಪಟ್ಟಣದ ಪತ್ರಿಕಾ ಭವನದಲ್ಲಿ ಸ್ಟೂಡೆಂಟ್ಸ್ ಇಸ್ಲಾಮಿಕ್ ಆರ್ಗನೈಸೇಷನ್ ಆಫ್ ಇಂಡಿಯಾ ರಾಜ್ಯ ಕಾರ್ಯದರ್ಶಿ ಅಬುಬಕರ ಸಿದ್ದೀಕ್ ಮಾತನಾಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಶೈಕ್ಷಣಿಕ ಅಭಿವೃದ್ಧಿಗಾಗಿ ಎಸ್.ಐ.ಓ. ಮತ್ತು ಸೆಂಟರ್ ಫಾರ್ ಎಜುಕೇಷನಲ್ ರಿಸರ್ಚ್ ಮತ್ತು ಅನಾಲಿಸಿಸ್ ಸಹಯೋಗದಲ್ಲಿ ಫೆ.15 ರವರೆಗೆ ಕಲಿಕೆಯೇ ಕಲ್ಯಾಣ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು. ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದಿರುವ ಕೊಪ್ಪಳ್ಳ,ರಾಯಚೂರು, ಕಲಬುರಗಿ, ಯಾದಗಿರಿ, ಬೀದರ್,ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ 'ಲ್ಲಿನ ಸರ್ಕಾರಿ ಹಾಗೂ ಮೌಲಾನಾ ಆಜಾದ್ ಶಾಲೆಗಳಲ್ಲಿನ ಎಸ್.ಎಸ್.ಎಲ್.ಸಿ ಹಾಗೂ




ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಪರೀಕ್ಷೆಯಲ್ಲಿ ಉತ್ತಮ ಸಾಧನೆಯನ್ನು ತೋರುವುದಕ್ಕೆ ಅಗತ್ಯ ಅರಿವು ಮೂಡಿಸುವುದು.ತರಬೇತಿಯನ್ನು ನೀಡುವುದು, ವಿಶೇಷವಾದ ಕ್ಯಾರಿಯರ್ ಆಕಾಡೆಮಿಗಳನ್ನು ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಕಲಿಕಾ ವಾತಾವರಣವನ್ನು ಮೂಡಿಸುವುದು ಸೇರಿದಂತೆ ವಿದ್ಯಾರ್ಥಿಗಳ ಅನುತೀರ್ಣ ಪ್ರಮಾಣವನ್ನು ಕಡಿಮೆ ಮಾಡುವುದಕ್ಕೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಕಾರ್ಯದರ್ಶಿ ಮಹಮ್ಮದ್ ಅಜೀಮ್, ಮಾನ್ವಿ ತಾ.ಅಧ್ಯಕ್ಷರಾದ ಅಜರ್, ಕಾರ್ಯದರ್ಶಿ ಮುಝುಕಿರ್ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H